ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 169 ಸಂಚಿಕೆ- 169 | PAGE-8 ಪುಟ-8 | ಶುಕ್ರವಾರ 15.08.2025 | RS.2/- ಬೆಲೆ 2/-

## ಭಾವೈಕ್ಯತೆ ಗಟ್ಟಿಗೊಳ್ಳಲು ತಿರಂಗಾ ಯಾತ್ರೆ ಪೂರಕ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ ಬೀದರ. ಆ.14 : ಭಾವ್ಯಕ್ಯತೆ ಗಟ್ಟಿಗೊಳ್ಳಲು ಹರ್ ಘರ್ ತಿರಂಗಾ ಯಾತ್ರೆ ಪೂರಕವಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಗುರುವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ,

(2ನೇ ಪುಟ ನೋಡಿ)

## ಮೊದಲು ನಾವು ದಾಳಿ ಮಾಡಲ್ಲ ಪ್ರತೀಕಾರ ತೀರಿಸಲು ಹಿಂದೆ ಸರಿಯಲ್ಲ



ಮಲ್ಲಮ್ಮನುಡಿವಾರ್ತೆನವದೆಹಲಿ:ಅ.14: ನಮ್ಮ ದೇಶದ ಸಶಸ್ತ್ರ ಪಡೆಗಳು ದೇಶವನ್ನು ರಕ್ಷಿಸುವ ವಿಚಾರದಲ್ಲಿ ಯಾವುದೇಪರಿಸ್ಥಿತಿಯನ್ನುಎದುರಿಸಲು ಸಿದ್ಧವಾಗಿವೆ ಎಂದು ಆಪರೇಷನ್ ಸಿಂಧೂರ್ ತೋರಿಸಿಕೊಟ್ಟಿತು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.


ಸ್ವಾತಂತ್ರ್ಯ ದಿನಾಚರಣೆ-ಯ ಮುನ್ನಾ ದಿನ ದೇಶವನ್ನು ಉದ್ದೇಶಿ ಮಾತನಾಡಿದ ಅವರು, ಕಾರ್ಯತಂತ್ರದ ಸ್ಪಷ್ಟತೆ ಮತ್ತು ತಾಂತ್ರಿಕ ಸಾಮರ್ಥ್ಯದೊಂದಿಗೆ, ನಮ್ಮ ಯೋಧರು ಗಡಿಯಾಚೆ-ಯ ಭಯೋತ್ಪಾದಕರ ನೆಲೆಗಳನ್ನು ನಾಶ ಮಾಡಿದರು. ಮಾನವಕುಲವು ಭಯೋತ್ಪಾದನೆಯ ವಿರುದ್ಧ ನಡೆಸಿದ ಹೋರಾಟದಲ್ಲಿ ಆಪರೇಷನ್ ಸಿಂಧೂರ್ ಒಂದು ಐತಿಹಾಸಿಕ ಉದಾಹರಣೆಯಾಗಿ ನಿಲ್ಲುತ್ತದೆ ಎಂದು ನಾನು ನಂಬುತ್ತೇನೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಮ್ಮ ಪ್ರತಿಕ್ರಿಯೆಯಲ್ಲಿ ಹೆಚ್ಚು ಗಮನ ಸೆಳೆದದ್ದು ನಮ್ಮ ಒಗ್ಗಟ್ಟು. ಇದು ನಮ್ಮನ್ನು ವಿಭಜಿಸಲು ಬಯಸಿದವರಿಗೆ ಸರಿಯಾದ ಉತ್ತರ. ಭಾರತದ

(2ನೇ ಪುಟ ನೋಡಿ)




## ಮಹಾದಾಸೋಹಿ ಸಂಸ್ಥಾನದ 8ನೇ ಪೀಠಾಧಿಪತಿ ಡಾ.ಅಪ್ಪ ಲಿಂಗೈಕ್ಯ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಅ.14:ಮಹಾದಾಸೋಹಿ ಸಂಸ್ಥಾನದ 8ನೇ ಪೀಠಾಧಿಪತಿ ಡಾ.ಶರಣಬಸವಪ್ಪ ಅಪ್ಪ(91) ಅವರು ವಯೋಸಹಜ ಕಾಯಿಲೆಯಿಂದ ಲಿಂಗೈಕ್ಯರಾಗಿದ್ದಾರೆ.ಪರಮ ಪೂಜ್ಯ ಡಾ. ಶ್ರೀ ಶರಣಬಸಪ್ಪ ಅಪ್ಪಾಜಿ ಅವರು ಇಂದು 14 ಆಗಸ್ಟ್ 2025, ರಾತ್ರಿ 9:23 ಕ್ಕೆ ಶಾಂತಿಯುತವಾಗಿ ಪರಂ ಧಾಮಕ್ಕೆ ಪ್ರಯಾಣಿಸಿದ್ದಾರೆ ಎಂದು ಸಂಸ್ಥೆಯ ವತಿಯಿಂದ ಬಿಡುಗಡೆಗೊಳಿಸಲಾದ ಹೇಳಿಕೆಯಲ್ಲಿ ತಿಳಿಸಲಾಗಿದೆ.ಇಂದು ಬೆಳಗಿನಿಂದಲೇ ಅಪ್ಪಾಜಿಯವರ ಜೀವ ಚಟುವಟಿಕೆಗಳು ಅತ್ಯಂತ ಗಂಭೀರವಾಗಿದ್ದರೂ,ಅವರು ಸಂತೋಷದಿಂದ ಕುಟುಂಬದ ಎಲ್ಲ ಸದಸ್ಯರೊಂದಿಗೆ ಸಮಯ ಕಳೆದರು. ಅವರ ಅಂತಿಮ ಇಚ್ಛೆಯಂತೆ, ಅಪ್ಪಾಜಿಯವರನ್ನು ಶರಣಬಸವೇಶ್ವರ ದೇವಾಲಯಕ್ಕೆ ಆರೋಗ್ಯಕರ ಉಸಿರಾಟದ ಸ್ಥಿತಿಯಲ್ಲಿ ಕೊಂಡೊಯ್ಯಲಾಯಿತು. ಅಲ್ಲಿ ಅಪ್ಪಾಜಿಯವರು ಗರ್ಭಗುಡಿಗೆ ಪ್ರವೇಶಿಸಿ ಶ್ರೀ ಶರಣಬಸವೇಶ್ವರರ ದರ್ಶನ ಪಡೆದರು ಹಾಗೂ ಆರತಿ ನಡೆಯಿತು. ನಂತರ ವೈದ್ಯಕೀಯ ಮೇಲ್ವಿಚಾರಣೆಯ ವಾಹನದಲ್ಲಿ ಪ್ರದಕ್ಷಿಣೆ ಮಾಡಲಾಯಿತು.ಸಂಜೆ ಸುಮಾರು 7:30ಕ್ಕೆ ಅಪ್ಪಾಜಿಯವರನ್ನು ದಾಸೋಹ ಮನೆಗೆ ಕರೆದೊಯ್ಯಲಾಯಿತು, ಅಲ್ಲಿ ದಿನದ ಮೊದಲಾರ್ಧದಲ್ಲೇ ತಾತ್ಕಾಲಿಕ ಐಸಿಯು ಸಿದ್ಧಪಡಿಸಲಾಗಿತ್ತು. ಅಂತಿಮ ಉಸಿರಿನವರೆಗೂ ಸಮರ್ಪಿತ ವೈದ್ಯಕೀಯ ತಂಡದ ಕಾಳಜಿಯಲ್ಲಿ ಎಲ್ಲಾ ಚಿಕಿತ್ಸಾ ಮತ್ತು ಸಹಾಯಕ ಔಷಧೋಪಚಾರಗಳನ್ನು ಮುಂದುವರೆಸಲಾಯಿತು, ಅಪ್ಪಾಜಿಯವರ ಆರೋಗ್ಯಕ್ಕಾಗಿ ಅತ್ಯುತ್ತಮ ಪ್ಯಾಲಿಯೇಟಿವ್ ಚಿಕಿತ್ಸೆ ವ್ಯವಸ್ಥೆ ಮಾಡಲಾಗಿತ್ತು ಎಂದು ಪ್ರಕಟಣೆ ತಿಳಿಸಿದೆ.

## ಸಂಭ್ರಮಕ್ಕೆ ಸಜ್ಜಾಗಿರುವ ಕೆಂಪು ಕೋಟೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.14: ದೆಹಲಿಯ ಕೆಂಪು ಕೋಟೆ 2025ರ ಸ್ವಾತಂತ್ರ್ಯ ದಿನಾಚರಣೆಗೆ ಸಜ್ಜಾಗಿದೆ.

ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾಗವಹಿಸಲು ಸುಮಾರು 5,000 ವಿಶೇಷ ಅತಿಥಿಗಳನ್ನ ವಿವಿಧ ಕ್ಷೇತ್ರಗಳಿಂದ ಆಹ್ವಾನಿಸಲಾಗಿದೆ. ಜೊತೆಗೆ ಈ ಬಾರಿ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಆಪರೇಷನ್ ಸಿಂಧೂರ ಪ್ರತಿಬಿಂಬಿಸಲಿದೆ.

(2ನೇ ಪುಟ ನೋಡಿ)

## ಮತಗಳ್ಳತನ ವಿರುದ್ಧ ಬಿಹಾರದಿಂದಲೇ ನೇರ ಹೋರಾಟ: ರಾಹುಲ್ ಗಾಂಧಿ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.14: ಬಿಹಾರದಲ್ಲಿ ಆಗಸ್ಟ್ 17ರಿಂದ ಆರಂಭಗೊಳ್ಳುವ 'ಮತದಾರ ಅಧಿಕಾರ ಯಾತ್ರೆ' ಮೂಲಕ ದೇಶವ್ಯಾಪಿ 'ಮತದಾನ ಕಳ್ಳತನ' ವಿರುದ್ಧ ನೇರ ಹೋರಾಟಕ್ಕೆ ಇಳಿಯುವುದಾಗಿ ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಘೋಷಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಅವರು, ಇದು ಕೇವಲ ಚುನಾವಣೆಯ ವಿಷಯವಲ್ಲ. ಪ್ರಜಾಪ್ರಭುತ್ವ, ಸಂವಿಧಾನ ಹಾಗೂ 'ಒಬ್ಬ ವ್ಯಕ್ತಿ, ಒಂದು ಮತ' ತತ್ವವನ್ನು ರಕ್ಷಿಸಲು ನಡೆಯುತ್ತಿರುವ ನಿರ್ಣಾಯಕ ಹೋರಾಟ. ದೇಶಾದ್ಯಂತ ಮತದಾರರ ಪಟ್ಟಿಯಲ್ಲಿನ ಶುದ್ಧೀಕರಣವೇ ಈ ಅಭಿಯಾನದ ಪ್ರಮುಖ ಗುರಿ.

(2ನೇ ಪುಟ ನೋಡಿ)




ಚಿಟಗುಪ್ಪ ಪುರಸಭೆ ವತಿಯಿಂದ
79ನೇ
ಸ್ವಾತಂತ್ರ್ಯ ದಿನಾಚರಣೆಯ
ಶುಭಾಶಯಗಳು
ಶ್ರೀ ದಿಲೀಪಕುಮಾರ್ ಬಗ್ದಲಕ್ಕರ್
ಅಧ್ಯಕ್ಷರು
ಪುರಸಭೆ ಚಿಟಗುಪ್ಪ.
ಶ್ರೀ ನಸೀರಖಾನ ಸಾಬ್
ಉಪಾಧ್ಯಕ್ಷರು
ಪುರಸಭೆ ಚಿಟಗುಪ್ಪ.
ಶ್ರೀ ಹುಸಾಮುದ್ದೀನ್ ಬಾಬಾ
ಮುಖ್ಯಾಧಿಕಾರಿಗಳು
ಪುರಸಭೆ ಚಿಟಗುಪ್ಪ.
ಶುಭಕೋರುವವರು
ಸಿಬ್ಬಂದಿ ವರ್ಗ ಸರ್ವ ಸದಸ್ಯರು ಚಿಟಗುಪ್ಪ ಪುರಸಭೆ
ಸ್ವಚ್ಛತೆಗೆ ಪ್ರಥಮ ಆದ್ಯತೆ

# ಬಸವ ಮಾಲಾ ಧಾರಿಗಳಿಂದ ದೇವಸ್ಥಾನ ಜೀರ್ಣೋದ್ಧಾರ



ಮಲ್ಲಮ್ಮ ನುಡಿ ವಾರ್ತೆ

ಸುರಪುರ ಸುದ್ದಿ : ಸುರಪುರ ತಾಲ್ಲೂಕಿನ ಕುರುಬನ ತಳ್ಳಳ್ಳಿ ಗ್ರಾಮದ ಹೋರವಲಯದಲ್ಲಿರುವ ಗೋಣಿಮಟ್ಟಿ ಶ್ರೀ ಬಸವೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯವನ್ನು ಬಸವ ಮಾಲಾ ಧಾರಿಗಳಿಂದ ನಡೆಸಲಾಯಿತು.

ಸುಮಾರು 20 ವರ್ಷಗಳಿಂದ ದೇವಸ್ಥಾನದವಿಚಾರದಲ್ಲಿಯಾವುದೇ ಕಾರ್ಯ ಚಟುವಟಿಕೆಗಳು ನೆರವೇರದಿರುವುದನ್ನು ಗಮನಿಸಿ ನೆನೆಗುದಿಗೆ ಬಿದ್ದಿರುವ ಹಾಗೂ ಅಳಿವಿನಂಚಿನಲ್ಲಿರುವ ಶ್ರೀಗೋಣಿಮಟ್ಟಿ ಬಸಪ್ಪಯ್ಯ ದೇವಸ್ಥಾನಕ್ಕೆಸಂಪರ್ಕಿಸುವರಸ್ತೆ ಸೇರಿದಂತೆ ದೇವಸ್ಥಾನದ ಸುತ್ತ ಮುತ್ತಲಿನ ಕಲ್ಲು–ಮುಳ್ಳು–ಗಿಡ ಗಂಟಿಗಳನ್ನು ಜೆಸಿಬಿ ಯಂತ್ರದ ಸಹಾಯದಿಂದ ತೆರವುಗೊಳಿಸುವ ಮೂಲಕ ಸ್ವಚ್ಛತೆ ಕಾರ್ಯ ಕೈಗೊಳ್ಳಲಾಯಿತು.

ಶ್ರಾವಣ ಮಾಸದ ಕೊನೆಯ ಸೋಮವಾರದಿನದಂದುಗೋಣಿಮಟ್ಟಿ ಬಸಪ್ಪಯ್ಯ ದೇವಸ್ಥಾನದಲ್ಲಿ (ಖಾಂಡ) ಮಹಾ ಪ್ರಸಾದ ನಡೆಸಲು ನಿರ್ಧರಿಸಲಾಗಿದೆ.

ಮಾಲಾ ಧಾರಿಗಳ ಸ್ವಚ್ಛತಾ ಕಾರ್ಯಕ್ಕೆಕೆ.ತಳ್ಳಳ್ಳಿ ಗ್ರಾಮಸ್ಥರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಈ ಸಂದರ್ಭದಲ್ಲಿ ಶರಣಗೌಡ ವಡಿಗೇರಿ,ಚನ್ನಗೌಡ ಚನ್ನೂರ, ಅಶೋಕ ಕಾಕರಗಲ್ಲ, ರಾಘವೇಂದ್ರ ಮಾಸ್ತರ, ನಾಗರಾಜ ಪತ್ತಾರ, ಕುಮಾರ ದೊರೆ, ಕರಿಬಸಪ್ಪಗೌಡ ಚನ್ನೂರ, ದೇವಣ್ಣ ಆಲಗೂರ , ಶ್ರೀಕಾಂತ್ ಕಮತಗಿ , ವಿಶ್ವರಾಧ್ಯ ಮಾಲಿ ಪಾಟೀಲ್ , ಆನಂದ ಆಲಗೂರ ,ಶಿವರಾಜ ಕಮತಗಿ , ಶರಣಗೌಡ ಕಾಕರಗಲ್ಲ ಸೇರಿದಂತೆ ಇತರರು ಇದ್ದರು.



ಹುಮನಾಬಾದ:ಪಟ್ಟಣದ ಶ್ರೀ ವೀರಭದ್ರೇಶ್ವರ ದೇಸವ್ಥಾನದಲ್ಲಿ ಸತೀಷ ಸ್ವಾಮಿ ನಿಟ್ಟೂರಕರ್ ಪರಿವಾರದಿಂದ ಶ್ರೀ ವೀರಭದ್ರೇಶ್ವರರ ರುದ್ರಭಿಷೇಕ ಹಾಗೂ ವಿಶೇಷ ಪೂಜೆ ಜರುಗಿತ್ತು. ಈ ಸಂದರ್ಭದಲ್ಲಿ ರೇವಣಸಿದ್ಧಯ್ಯ ಗುರುಗಳಿಂದ ವಿಶೇಷ ಪೂಜೆ ಹಾಗೂ ಭಜನೆ ಕೀರ್ತನೆ ಜರುಗಿದ್ದವು. ಶಂಕರಯ್ಯ ಸ್ವಾಮಿ, ಸಚ್ಚಿನ್ ವ್ಮಠಪತಿ, ಸೋಮಶೇಖರ್ ವ್ಮಠಪತಿ, ಮಂಜುನಾಥ ಸ್ವಾಮಿ, ಸುಮಾ ಎಸ್. ವ್ಮಠಪತಿ ಹಾಗೂ ಶಿವಯ್ಯ ಹಿರೇವ್ಮಠ ಮುತ್ತಂಗಿ ಹಾಗೂ ಭಕ್ತಾಧಿಗಳಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಕನ್ನಡಮ್ಮನ ಸೇವೆಗೆ ಸದಾ ಸಿದ್ಧ, ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ : ಬಿ.ಗಿರೀಶಾನಂದ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕನ್ನಡಮ್ಮನ ಸೇವೆಗೆ ಕರವೇ ಸೇನಾನಿಗಳು ಸದಾ ಸಿದ್ಧ, ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ ಎಂದು ಕರವೇ ಜಿಲ್ಲಾಧ್ಯಕ್ಷ ಬಿ.ಗಿರೀಶಾನಂದ ಜ್ಞಾನಸುಂದರ ತಿಳಿಸಿದರು. ಅವರು ಬುಧವಾರದಂದು ಕೊಪ್ಪಳ ತಾಲೂಕಿನ ಮುದ್ದಾಬಳ್ಳಿ ಗ್ರಾಮ ಶಾಖೆಯ ಪೂರ್ವಬಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ ನಾರಾಯಣಗೌಡರ ನೇತೃತ್ವದಲ್ಲಿ ನಾಡಿನ ಉದ್ದಲಕ್ಷೂಲಕ್ಷಾಂತರ ಯುವಕ ಯುವತಿಯರಿಗೆ ಕನ್ನಡದ ದೀಕ್ಷೆ ನೀಡಿ ಕನ್ನಡಮ್ಮ ಸೇವೆಗೆ ಪಣ ತೊಟ್ಟು ಜೀವನವನ್ನು ಮುಡಿಪಾಗಿಟ್ಟಿದ್ದಾರೆ. ಕಳೆದ 26 ವರ್ಷಗಳಿಂದ ಕರವೇ ಕನ್ನಡ ನಾಡು ನುಡಿ ನೆಲ ಜಲ ಗಡಿಯ ವಿಚಾರದಲ್ಲಿ ರಾಜಿ ರಹಿತ ಹೋರಾಟ ಮಾಡುತ್ತಾ ಬಂದಿದೆ.

ಈ ಭಾಗದಲ್ಲಿ ಕಂಪನಿಗಳಿಗೆ ನೂರಾರು ಎಕರೆ ಕೃಷಿಭೂಮಿಯನ್ನು ಮಧ್ಯವರ್ತಿಗಳ ನೆರವಿನಿಂದ ರೈತರಿಂದ ಪುಸಲಾಯಿಸಿ ಪಡೆದುಕೊಂಡು 500 ಟಿಸಿಡಿ ಸಕ್ಕರೆ, 400 ಕೆಎಲ್‌ಪಿಡಿ ಎಥೆನಾಲ್, ಹಾಗೂ 300 ಮೆ.ವ್ಯಾ. ಕ್ಯೂಜೆನ್ ಸ್ಥಾವರ ನಿರ್ಮಾಣ ಮಾಡಲು ಹೊರಟಿರುವುದನ್ನು ಬಲವಾಗಿ ಖಂಡಿಸಿದ ಅವರು ಈ ಸ್ಥಾವರ ಸ್ಥಾಪನೆಯಿಂದ ಪರಿಸರ, ಅರಣ್ಯ, ಹವಮಾನ ಹಾಗೂ ಪ್ರಾಣಿ ಪಕ್ಷಿ ಮತ್ತು ಜೀವ ಸಂಕುಲಕ್ಕೆ ಮಾರಕವಾಗಿ ಪರಿಣಮಿಸಲಿದ್ದು,ಸುತ್ತಮುತ್ತಲಿರುವ ಕೃಷಿ ಜಮೀನುಗಳಲ್ಲಿ ಬೆಳೆ ಬೆಳೆಯಲಾಗದ ಪರಿಸ್ಥಿತಿ ನಿರ್ಮಾಣವಾಗಲಿದೆ. ಹಾಗೂ ಸುತ್ತಮುತ್ತಲಿನ ಎಲ್ಲಾ ಗ್ರಾಮದ ಜನಜೀವನಕ್ಕೆ ಸಾಂಕ್ರಾಮಿಕ ರೋಗ ಹರಡುವ ಬೀತಿ ಇದ್ದು, ಈಗಾಗಲೇ ಸಾಕಷ್ಟು ಕಾರ್ಖಾನೆಗಳ ಸ್ಥಾಪನೆಯಿಂದ ಈ ಭಾಗದಲ್ಲಿ ಕ್ಯಾನ್ಸರ್ ಪೀಡಿತರ ಸಂಖ್ಯೆಹೆಚ್ಚುತ್ತಿದ್ದು, ನವಜಾತ ಶಿಶುಗಳಲ್ಲಿ ದೈಹಿಕ ವಿಕಲತೆಗಳ ಪ್ರಮಾಣ ಹೆಚ್ಚುತ್ತಿದೆ. ದೇವರು ಸೃಷ್ಟಿಸಿದ ಈ ಅದ್ಭುತ ಪರಿಸರವನ್ನು ಕೈಗಾರಿಕರಣದಿಂದ ಕಲುಷಿತಗೊಳಿಸುವುದು ಖೇಧಕರವಾಗಿದೆ. ಪರಿಸರವು ನಮ್ಮ ಉಳಿವು ಮತ್ತು ಭೂಮಿಯ ಅಸ್ತಿತ್ವದ ಆಧಾರವಾಗಿದೆ. ಮುಂಬರುವ ದಿನಗಳಲ್ಲಿ ಕರವೇಯು ಈ ಭಾಗದ ಹಿರಿಯ ಮುಖಂಡರ ಸಹಕಾರದಿಂದ ಪರಿಸರ ಹಾಗೂ ರೈತರ ಹಿತಕಾಯಲು ಈ ಕಾರ್ಖಾನೆ ಸ್ಥಾಪನೆ ವಿರೋಧಿಸಿ ಸಂಘಟಿತ ಹೋರಾಟವನ್ನು ರೂಪಿಸಲಿದೆ ಎಂದರು. ಸಭೆಯಲ್ಲಿ ಕರವೇ ಜಿಲ್ಲಾ ಉಪಾಧ್ಯಕ್ಷ ಶಿವನಗೌಡ ಪಾಟೀಲ ಹಲಗೇರಿ,ಜಿಲ್ಲಾ ಯುವ ಘಟಕ ಅಧ್ಯಕ್ಷ ಹನುಮಂತ ಬೆಸ್ತರ ಮಾತನಾಡಿದರು. ಗ್ರಾಮ ಶಾಖೆಯ ಪೂರ್ವಬಾವಿ ಸಭೆಯಲ್ಲಿ ನೂತನ ಪದಾಧಿಕಾರಿಗಳನ್ನು ನೇಮಕವಾಡಲಾಯಿತು. ಅಧ್ಯಕ್ಷರಾಗಿ ಮಹೇಶ್ವರ ಹಿರೇಮಠ, ಉಪಾಧ್ಯಕ್ಷರಾಗಿ ತಿಮ್ಮರಡ್ಡಿ ಬಿಸರಳ್ಳಿ, ಮಲ್ಲಪ್ಪ ಕುಕನೂರು, ಪ್ರಧಾನ ಕಾರ್ಯದರ್ಶಿಯಾಗಿ ಶರಣಗೌಡ ಪೊ. ಪಾಟೀಲ, ಸಂಘಟನಾ ಕಾರ್ಯದರ್ಶಿಯಾಗಿ ವಿಶ್ವನಾಥ ಕಮ್ಮಾರ,ಹನುಮಂತ ಹಟಮಾರಿ, ಕಾರ್ಯದರ್ಶಿಯಾಗಿ ಕಲ್ಮೇಶ ಹೊಸೂರು, ಸಂಕೇತ ಪಾಟೀಲ, ಖಜಾಂಚಿಯಾಗಿ ಪ್ರಕಾಶ ತೋಟದ ಅವರು ನೇಮಕವಾದರು.

ಈ ಸಂದರ್ಭದಲ್ಲಿ ಕೊಪ್ಪಳ ತಾಲೂಕಾಧ್ಯಕ್ಷ ಗವಿಸಿದ್ದಪ್ಪ ಚಕ್ಕಡಿ, ನಗರಾಧ್ಯಕ್ಷ ಪ್ರಫುಲ್‌ಕುಮಾರ ಪಾಟೀಲ,ಗೊಂಡಬಾಳ ಹೋಬಳಿ ಅಧ್ಯಕ್ಷ ಕುಮಾರಸ್ವಾಮಿ ನಾಗರಳ್ಳಿ, ಉಪನ್ಯಾಸಕರಾದ ದೇವೆಂದ್ರಸ್ವಾಮಿ ಎಕದಂಡಿಗಿಮಠ,ಗ್ರಾಮದ ಹಿರಿಯ ಮುಖಂಡರಾದ ಶೇಖರಯ್ಯ ಹಿರೇಮಠ, ಸೋಮಯ್ಯ ಹೊಸೂರು, ಪ್ರಶಾಂತಗೌಡ ಪಾಟೀಲ, ಮಂಜುನಾಥ ಡಂಬ್ರಹಳ್ಳಿ, ಗವಿಸಿದ್ದನಗೌಡ ಮಾಲಿಪಾಟೀಲ, ತೋಟಯ್ಯ ಹಿರೇಮಠ, ಮಲ್ಲಪ್ಪರಾಜ ಹಡಪದ, ವಿಶ್ವ ಹಿರೇಮಠ, ಮಹೇಶ ಹಡಪದ, ಹರ್ಷ ನಾಯಕ ಹಾಗೂ ಇನ್ನೂ ಅನೇಕರು ಉಪಸ್ಥಿತರಿದ್ದರು.

# ಮಾನಸೂನ್ ಸ್ಟೂಡಿಯೋ–2025: ಸುಸ್ಥಿರ ನಗರ ಮೊಬಿಲಿಟಿಯನ್ನು ಸಬಲೀಕರಣ /ಶಕ್ತಗೊಳಿಸುವುದು



ಮಲ್ಲಮ್ಮ ನುಡಿ ವಾರ್ತೆ

ನಗರಭೂಸಾರಿಗೆನಿರ್ದೇಶನಾಲಯ (DULT)ಕರ್ನಾಟಕದ ನಗರಗಳಲ್ಲಿ ಸುಸ್ಥಿರ ಮೊಬಿಲಿಟಿಯನ್ನು ಉತ್ತೇಜಿಸುವ ಉದ್ದೇಶದಿಂದ 2007 ರಲ್ಲಿ ಸ್ಥಾಪಿಸಲಾದ ರಾಜ್ಯ ಮಟ್ಟದ ನಿರ್ದೇಶನಾಲಯವಾಗಿದೆ. ನಗರ ಭೂ ಸಾರಿಗೆ ನಿರ್ದೇಶನಾಲಯವು 2014ರಿಂದ,ಕರ್ನಾಟಕದ ವಾಸ್ತುಶಿಲ್ಪ ಕಾಲೇಜುಗಳ ಸಹಭಾಗಿತ್ವದಲ್ಲಿ ಸಾಮರ್ಥ್ಯ ಮತ್ತು ಪ್ರಾಯೋಗಿಕ ಕಲಿಕೆಗಳನ್ನು ನಿರ್ಮಿಸಲು ಮಾನ್ಸೂನ್ ಸ್ಟುಡಿಯೋ ಎಂಬ ವಾರ್ಷಿಕ ಕಾರ್ಯಕ್ರಮವನ್ನು ನಡೆಸುತ್ತಿದೆ. ಮಾನ್ಸೂನ್ ಸ್ಟುಡಿಯೋ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಶೈಕ್ಷಣಿಕ ಕಲಿಕೆಯನ್ನು ಪ್ರಾಯೋಗಿಕ ಅನುಭವದೊಂದಿಗೆ ಸಂಯೋಜಿಸಲು ಒಂದು ಅನನ್ಯ ಅವಕಾಶವನ್ನು ಒದಗಿಸುತ್ತದೆ, ಇದರಿಂದಾಗಿ, ನವೀನ, ಸುಸ್ಥಿರ ನಗರ ಮಧ್ಯಸ್ಥಿಕೆಗಳ ಮೂಲಕ ನಗರದ ಬೆಳವಣಿಗೆಗೆ ಕೊಡುಗೆ ನೀಡುತ್ತದೆ.

ಈ ವರ್ಷ ಇದನ್ನು ಕಲಬುರ್ಗಿಯ ಪಿಡಿಎಸ್‌ಎಸ್ ಸ್ಕೂಲ್ ಆಫ್ ಆರ್ಕಿಟೆಕ್ಚರ್‌ನಲ್ಲಿ, ಕಲಬುರ್ಗಿಯ ನಗರ ಮೊಬಿಲಿಟಿ ಯೋಜನೆ, ವಿನ್ಯಾಸ ಮತ್ತು ಕ್ರಿಯಾ ಸಂಶೋಧನಾ ಕೇಂದ್ರದೊಂದಿಗೆ, ನಗರ ಭೂ ಸಾರಿಗೆ ನಿರ್ದೇಶನಾಲಯ ಮತ್ತು ಕಲಬುರ್ಗಿಯ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಸಹಯೋಗದೊಂದಿಗೆ ಆಯೋಜಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಕಲಬುರಗಿ ಮಹಾನಗರ ಪಾಲಿಕೆ ಮತ್ತು ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ (ಕುಡಾ) ಸಹ ಬೆಂಬಲ ನೀಡಿದೆ.

ಈ ಮೂರು ದಿನಗಳ ಕಾರ್ಯಕ್ರಮವು ವಿದ್ಯಾರ್ಥಿಗಳು,ಯುವ ವೃತ್ತಿಪರರು,ನಗರ ಯೋಜಕರು ಮತ್ತು ವಿನ್ಯಾಸಕರು ಒಟ್ಟಿಗೆ ಸೇರಿ ಮೂರು ಪ್ರಮುಖ ವಲಯಗಳಾದ ಮಾರುಕಟ್ಟೆ ವಲಯ, ಸಾಗಣೆ ವಲಯ ಮತ್ತು ಪರಂಪರೆ ವಲಯಗಳಲ್ಲಿ ನೈಜ–ಪ್ರಪಂಚದ ಯೋಜನೆಗಳಲ್ಲಿ ಕೆಲಸ ಮಾಡಲು ಒಟ್ಟುಗೂಡಿಸುತ್ತದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಕ್ಷೇತ್ರ ಭೇಟಿ, ದಾಖಲಾತಿ ಅಭ್ಯಾಸಗಳು ಮತ್ತು ಸಹಯೋಗ ವಿನ್ಯಾಸ ಕಾರ್ಯಾಗಾರಗಳಲ್ಲಿ ತೊಡಗಿಸಿಕೊಳ್ಳುತ್ತಾರೆ, ಇದರಿಂದಾಗಿ, ಕಲಬುರಗಿಯ ನಗರದಲ್ಲಿನ ಸವಾಲುಗಳಿಗೆ ಸ್ಥಳೀಯ ಆದಾರಿತ ಸುಸ್ಥಿರ ನಗರ ಮೊಬಿಲಿಟಿಯ ಪರಿಹಾರಗಳನ್ನು ಅಭಿವೃದ್ಧಿಪಡಿಸುತ್ತಾರೆ.

ಈ ಕಾರ್ಯಕ್ರಮದ ಉದ್ಘಾಟನೆಯ ಸಂದರ್ಭದಲ್ಲಿ ಎಚ್‌ಕೆಇ ಸೊಸೈಟಿಯ ಉಪಾಧ್ಯಕ್ಷರಾದ ಶ್ರೀ ರಾಜಾ ಭೀಮಳ್ಳಿ ಮಾತನಾಡಿ, ನಗರ ಸನ್ನಿವೇಶದಲ್ಲಿ ವಾಸ್ತುಶಿಲ್ಪಿಗಳ ಮಹತ್ವದ ಬಗ್ಗೆ ವಿವರಿಸಿದರು. ಕಲಬುರ್ಗಿ ವಿಭಾಗದ ಪಟ್ಟಣ ಯೋಜನಾ ವಿಭಾಗೀಯ ಕಚೇರಿಯ ಜಂಟಿ ನಿರ್ದೇಶಕರಾದ ಶ್ರೀ ಶೈಲೇಂದರ್ ಸಿಂಗ್, ರವರು ನಗರ ಯೋಜನೆಯಲ್ಲಿ ನಾವೀನ್ಯತೆಯನ್ನು ಬೆಳೆಸುವ ಮಹತ್ವವನ್ನು ಒತ್ತಿ ಹೇಳಿದರು. ಹಾಗೂ "ನಗರ ಮೊಬಿಲಿಟಿ ಮತ್ತು ಅಭಿವೃದ್ಧಿಯಲ್ಲಿ ಸುಸ್ಥಿರ ಪರಿಹಾರಗಳೊಂದಿಗೆ ಕಲಬುರ್ಗಿಯ ಭವಿಷ್ಯವನ್ನು ರೂಪಿಸಲು ಯುವ ಮನಸ್ಸುಗಳಿಗೆ ಮಾನ್ಸೂನ್ ಸ್ಟುಡಿಯೋ ಒಂದು ವೇದಿಕೆಯಾಗಿದೆ" ಎಂದು ಹೇಳಿದರು. ಕೆಎಲ್‌ಇ ಟೆಕ್ ವಿಶ್ವವಿದ್ಯಾಲಯದ ಪ್ರಮುಖ ತಜ್ಞ ಪ್ರಾಧ್ಯಾಪಕಿ ಅರ್. ಗೀತಾಂಜಲಿ ರಾವ್ ಅವರು ನಗರ ಯೋಜನೆ ಮತ್ತು ನಗರ ವಿನ್ಯಾಸದ ಕುರಿತು ಒಳನೋಟವುಳ್ಳ ಪ್ರಾತ್ಯಕ್ಷಿಕೆಯನ್ನು ಪ್ರಸ್ತುತಪಡಿಸಿದರು.

ಉದ್ಘಾಟನಾ ಸಮಾರಂಭದಲ್ಲಿ ಶ್ರೀ ಗಂಗಾಧರ ಮಲ್ಗಿ, ಆಯುಕ್ತರು, ಕಲಬುರ್ಗಿ ನಗರಾಭಿವೃದ್ಧಿ ಪ್ರಾಧಿಕಾರ (ಕುಡಾ),ಕೆಕೆಆರ್‌ಡಿಬಿ ಹೆಚ್ಚುವರಿ ನಿರ್ದೇಶಕರಾದ ಶ್ರೀಮತಿ ಪ್ರವೀಣ ಪ್ರಿಯಾ ಡೇವಿಡ್, ನಗರ ಭೂ ಸಾರಿಗೆ ನಿರ್ದೇಶನಾಲಯದ ವಿಶೇಷಾಧಿಕಾರಿ ಡಾ. ಮೋನಿಕಾ ಕಶ್ಯರಿ, ಎಚ್‌ಕೆಇಎಸ್ ಕಾರ್ಯದರ್ಶಿ ಶ್ರೀ ಉದಯಕುಮಾರ್ ಚಿಂಚೋಳ್ಳಿ ಮತ್ತು ಎಚ್‌ಕೆಇಎಸ್‌ನ ಜಿಸಿ ಸದಸ್ಯರಾದ ಶ್ರೀ ಶರಣಬಸಪ್ಪ ಹರ್ವಾಲ್, ತಾಲ್ಲೂಕು ಪಂಚಾಯತ್ ಸದಸ್ಯರು, ಕುಡಾ ಶ್ರೀ ಶಿವಕುಮಾರ್ ಪಾಟೀಲ್ ಮತ್ತು ನಗರ ಭೂ ಸಾರಿಗೆ ನಿರ್ದೇಶನಾಲಯದ ಅಧಿಕಾರಿಗಳು ಮತ್ತು ಪಿ.ಡಿ.ಎಸ್.ಎಸ್.ಎ.ಯ ಅಧ್ಯಾಪಕರು ಉಪಸ್ಥಿತರಿದ್ದರು.

ಮೂರು ದಿನಗಳ ಕಾರ್ಯಕ್ರಮದಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯದ ಪ್ರತಿನಿಧಿಗಳಿಂದ ಮಾರ್ಗದರ್ಶನ ಪಡೆದ ವಿದ್ಯಾರ್ಥಿಗಳು ಗುರುತಿಸಲಾದ ಮೂರು ವಲಯಗಳಿಗೆ ಭೇಟಿ ನೀಡಿ ಆಯ್ದ ಮೂರು ವಲಯಗಳಿಗೆ ನಗರಾಭಿವೃದ್ಧಿ ಮತ್ತು ಮೊಬಿಲಿಟಿಯಲ್ಲಿನ ಸವಾಲುಗಳಿಗೆ ಪರಿಹಾರಗಳನ್ನು ಒದಗಿಸಿದರು. ಕಾರ್ಯಕ್ರಮದ ಎರಡನೇ ದಿನದಂದು, ಕೆಎಲ್‌ಇ ಟೆಕ್ ವಿಶ್ವವಿದ್ಯಾಲಯದ ಪ್ರೊಫೆಸರ್ ಕಲ್ಲೇಶ್‌ಕುಮಾರ್ ಪಟೇಲ್ ಅವರು ಪ್ರಸ್ತಾವಿತ ಪರಿಹಾರಗಳನ್ನು ಅಭಿವೃದ್ಧಿಪಡಿಸುವಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಮತ್ತು ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದ ಮೂರನೇ ದಿನದಂದು, ಪರಿಹಾರಗಳನ್ನು ತೀರ್ಪುಗಾರರ ಅಧ್ಯಕ್ಷತೆಯನ್ನು ವಹಿಸಲಾಗಿದ್ದ ಶ್ರೀ ನಳಿನಿ ಅತುಲ್, ಐಎಎಸ್,ಕಾರ್ಯದರ್ಶಿ, ಕೆ–ಕೆಆರ್‌ಡಿಬಿ; ಶ್ರೀ ಅವಿನಾಶ್ ಎಸ್ ಶಿಂಧೆ ಐಎಎಸ್, ಆಯುಕ್ತರು, ಕಲಬುರ್ಗಿ ಮಹಾನಗರ ಪಾಲಿಕೆ ಮತ್ತು ಇತರ ಸದಸ್ಯರನ್ನೊಳಗೊಂಡ ಕೆಕೆಆರ್‌ಟಿಸಿ ಚೀಫ್ ಸಿಸ್ಟಮ್ ಮ್ಯಾನೇಜರ್ ಶ್ರೀ ಸಂತೋಷ್ ಗೋಗೇರಿ ಮತ್ತು ಕಲಬುರ್ಗಿ ಪಟ್ಟಣ ಯೋಜನಾ ವಿಭಾಗೀಯ ಕಚೇರಿಯ ಜಂಟಿ ನಿರ್ದೇಶಕರಾದ ಶ್ರೀ ಶೈಲೇಂದರ್ ಸಿಂಗ್ ರವರುಗಳ ಮುಂದೆ ಮಂಡಿಸಲಾಯಿತು. ವಿದ್ಯಾರ್ಥಿಗಳು ಮಾಡಿದ ಕೆಲಸವನ್ನು ಶ್ರೀ ನಳಿನಿ ಅತುಲ್, ಐಎಎಸ್, ಕಾರ್ಯದರ್ಶಿ, ಕೆಕೆಆರ್‌ಡಿಬಿ ರವರು ಶ್ಲಾಘಿಸಿದರು. ಶ್ರೀ ಅವಿನಾಶ್ ಎಸ್ ಶಿಂಧೆ, ಐಎಎಸ್,ಆಯುಕ್ತರು ಕಲಬುರ್ಗಿ ಮಹಾನಗರ ಪಾಲಿಕೆ ಕಲಬುರ್ಗಿಯಲ್ಲಿ ಮಾನ್ಸೂನ್ ಸ್ಟುಡಿಯೋವನ್ನು ಆಯೋಜಿಸಿದ್ದಕ್ಕಾಗಿ ನಗರ ಭೂ ಸಾರಿಗೆ ನಿರ್ದೇಶನಾಲಯ ಮತ್ತು ಕೆಕೆಆರ್‌ಡಿಬಿ ಜೊತೆಗೆ ಪಿಡಿಎಸ್‌ಎಸ್‌ಎಗೆ ಧನ್ಯವಾದಗಳನ್ನು ಅರ್ಪಿಸಿದರು.

ನಳಿನಿ ಅತುಲ್,ಐಎಎಸ್,ಕಾರ್ಯದರ್ಶಿ, ಕೆಕೆಆರ್‌ಡಿಬಿ ಇವರು ವಿಜೇತ ವಿದ್ಯಾರ್ಥಿಗಳ ತಂಡವನ್ನು ಸನ್ಮಾನಿಸಿದರು ಮತ್ತು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಶ್ರಮಿಸಿದ ಪಿಡಿಎಸ್‌ಎಸ್ ಕಾಲೇಜ್ ಆಫ್ ಆರ್ಕಿಟೆಕ್ಚರ್ ಮತ್ತು ನಗರ ಭೂ ಸಾರಿಗೆ ನಿರ್ದೇಶನಾಲಯದ ಸಂಪೂರ್ಣ ತಂಡವನ್ನು ಶ್ಲಾಘಿಸಿದರು.

# ಮಗುವಿನ ಪೋಷಕತ್ವ ಯೋಜನೆಯಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅಗಸ್ಟ 14– ಸಂಕಷ್ಟದಲ್ಲಿರುವ ಮಕ್ಕಳ ಪೋಷಣೆಗೊಸ್ಕರ ಪೋಷಕತ್ವ (ಫಾಸ್ಟರ್ ಕೇರ್) ಯೋಜನೆಯಡಿ ಅರ್ಹ ಕುಟುಂಬವನ್ನು ಗುರುತಿಸಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಲನ್ಯಾಯ (ಮಕ್ಕಳ ರಕ್ಷಣೆ ಮತ್ತು ಪೋಷಣೆ) ಕಾಯ್ದೆ 2015 ಸೆಕ್ಷನ್ 44ರನ್ವಯ ಪೋಷಕತ್ವ ಯೋಜನೆಯಡಿಯಲ್ಲಿ ವಿವಿಧ ಸಂಕಷ್ಟದಲ್ಲಿರುವ ಮಕ್ಕಳಿಗೆ ತಾತ್ಕಾಲಿಕವಾಗಿ ಕುಟುಂಬದ ವಾತಾವರಣ ಕಲ್ಪಿಸಿ, ರಕ್ಷಣೆ ಮತ್ತು ಪೋಷಣೆ ಮಾಡಲು ಅರ್ಹ ಕಟುಂಬವನ್ನು ಗುರುತಿಸಬೇಕಾಗಿರುವುದರಿಂದ ಅರ್ಜಿ ಆಹ್ವಾನಿಸಬೇಕಾಗಿರುತ್ತದೆ. ಮಕ್ಕಳ ಕಲ್ಯಾಣ ಸಮಿತಿಯ ಆದೇಶದ ಮೇರೆಗೆ ಮಕ್ಕಳನ್ನು ಒಂದು ವರ್ಷದ ಅವಧಿಗೆ ಮೀರದಂತೆ ಮಗುವನ್ನು ಪೋಷಕತ್ವ ಯೋಜನೆಯಡಿಯಲ್ಲಿ ನಿಯೋಜನೆ ಮಾಡಬಹುದಾಗಿದೆ. ಮಗು ಹಾಗೂ ಕುಟುಂಬದ ಹೊಂದಾಣಿಕೆಯ ಆಧಾರದ ಮೇಲೆ ಮಕ್ಕಳ ಕಲ್ಯಾಣ ಸಮಿತಿಯು ಮಗುವನ್ನು 18 ವರ್ಷ ವಯಸ್ಸಿನವರೆಗೂ ಪೋಷಕತ್ವವನ್ನು ಮುಂದುವರೆಸಲು ಅವಕಾಶ ಕಲ್ಪಿಸುತ್ತದೆ.

ಪ್ರತಿಯೊಂದು ಮಗುವಿಗೆ ಕುಟುಂಬದ ವಾತಾವರಣದಲ್ಲಿ ಬೆಳೆಯುವ ಹಕ್ಕಿರುತ್ತದೆ. ಆದರೆ ಕಾರಣಾಂತರಗಳಿಂದ ಏಕ ಪೋಷಕ, ಅನಾಥ ಅಥವಾ ಕುಟುಂಬದ ಪೋಷಣೆಯಿಂದ ವಂಚಿತರಾದ ಮಕ್ಕಳು ಎಂಬಿತ್ಯಾದಿ ಸಂಕಷ್ಟದಲ್ಲಿರುವ ಮಕ್ಕಳನ್ನು ಸರಕಾರಿ ಮತ್ತು ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿರುವ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ದಾಖಲು ಮಾಡುವ ಅನಿವಾರ್ಯತೆ ಉಂಟಾಗುತ್ತದೆ. ಇಂತಹ ಸಂದರ್ಭದಲ್ಲಿ ಮಗುವನ್ನು ಮಗುವಿನ ಸ್ವಂತ ಕುಟುಂಬದಲ್ಲಿ ಇರಿಸಲು ಸಾಧ್ಯವಾಗದಿದ್ದಾಗ ಅಂತಹ ಮಕ್ಕಳಿಗೆ ಪೋಷಕತ್ವ ಯೋಜನೆಯಡಿಯಲ್ಲಿ ಇತರೆ ಕುಟುಂಬದಲ್ಲಿ ಬೆಳೆಯಲು ಮಗುವಿನ ಹಿತ ದೃಷ್ಟಿಯಿಂದ ಮಕ್ಕಳ ಕಲ್ಯಾಣ ಸಮಿತಿಯು ತೀರ್ಮಾನವನ್ನು ತೆಗೆದುಕೊಳ್ಳುತ್ತದೆ. ಈ ಹಿನ್ನೆಲೆಯಲ್ಲಿ 6–18 ವರ್ಷದೊಳಗಿನ ವಿವಿಧ ರೀತಿಯ ಸಂಕಷ್ಟಕ್ಕೊಳಗಾಗಿ ಬೀದರ ಜಿಲ್ಲೆಯಲ್ಲಿ ಬಾಲನ್ಯಾಯ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ಮಕ್ಕಳ ಪಾಲನಾ ಸಂಸ್ಥೆಯಲ್ಲಿ ದಾಖಲಾಗಿರುವ ಮಕ್ಕಳನ್ನು ಹಾಗೂ ಪಾಲಕರು ತಮ್ಮ ಮಕ್ಕಳನ್ನು ರಕ್ಷಣೆ ಮತ್ತು ಪೋಷಣೆ ಮಾಡಲು ಅಸಮರ್ಥರಿದ್ದ ಸಂದರ್ಭದಲ್ಲಿ ಮಗುವಿನ ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ–ಕ್ಕೆ ಸಂಪರ್ಕಿಸಿದ್ದಲ್ಲಿ, ಇಂತಹ ಮಕ್ಕಳನ್ನು ಸಹ ಪೋಷಕತ್ವದಡಿ ತಾತ್ಕಾಲಿಕವಾಗಿ ಪಾಲನೆ ಮತ್ತು ಪೋಷಣೆ ಮಾಡಲಾಗುವುದು.

ಆದ್ದರಿಂದ ಇಂತಹ ಮಕ್ಕಳನ್ನು ಪೋಷಕತ್ವ ಯೋಜನೆಯಡಿ ನೋಡಿಕೊಳ್ಳಲು ಆಸಕ್ತಿ ಇರುವ ಪೋಷಕರು ಅರ್ಜಿಯನ್ನು ಸಲ್ಲಿಸಲು ಜಿಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮೈಲೂರ ಬೀದರ ಇವರಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08482–234003ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಶಾಲಾಪೂರ್ವ ಶಿಕ್ಷಣದ ಅಧ್ಯಾಯನಕ್ಕಾಗಿ ಮಕ್ಕಳ ಜಾಗೃತಿ ತಂಡ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆಗಸ್ಟ್,14–ಶಾಲಾಪೂರ್ವ ಶಿಕ್ಷಣ ಮಗುವಿನ ಭವಿಷ್ಯಕ್ಕೆ ಭದ್ರ ಬುನಾದಿಯಾಗಿದ್ದು, ಈ ವ್ಯವಸ್ಥೆಯಲ್ಲಿ ಔಪಚಾರಿಕ ಶಿಕ್ಷಣಕ್ಕೆ ಒಳಪಡುವ ಮುನ್ನವೇ ಮಗುವನ್ನು ಶಾಲೆಗೆ ತೆರಳಲು ಮಾನಸಿಕವಾಗಿ, ಬೌದ್ಧಿಕವಾಗಿ ಸಿದ್ಧಗೊಳಿಸಲಾಗುತ್ತಿದೆ' ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ತಿಪ್ಪಣ್ಣ ಸಿರಸಗಿ ಅವರು ಅಭಿಪ್ರಾಯಪಟ್ಟರು.

ಶಾಲಾಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮವನ್ನು ಅಧ್ಯಯನವನ್ನು ಮಾಡಲು ಬಂದಿದ್ದ ಬೆಂಗಳೂರಿನ ಮಕ್ಕಳ ಜಾಗೃತಿ ಸಂಸ್ಥೆಯ ಸಂಯೋಜಕರ ತಂಡದೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಯಾದಗಿರಿ ಹಾಗೂ ಕಲಿಕೆ–ಟಾಟಾ ಟ್ರಸ್ಟ್ ಇವರ ಸಹಯೋಗದೊಂದಿಗೆ ಈ ಕಾರ್ಯಕ್ರಮವು ಅನುಷ್ಠಾನವಾಗುತ್ತಿದೆ.

ಈ ತಂಡವು ಯಾದಗಿರಿ ಯೋಜನೆಯ ಕೌಳೂರು ವಲಯದ ಕೋಯಿಲೂರು 1ನೇ ಅಂಗನವಾಡಿ ಕೇಂದ್ರಕ್ಕೆ ಭೇಟಿನೀಡಿ ಶಾಲಾಪೂರ್ವ ಶಿಕ್ಷಣ ಚಟುವಟಿಕೆಗಳನ್ನು ಅವಲೋಕಿಸಿತು ಮತ್ತು ಅಂಗನವಾಡಿ ಶಿಕ್ಷಕಿ ಶ್ರೀಮತಿ ವಿಜಯಲಕ್ಷ್ಮಿ ಹಾಗೂ ಸಹಾಯಕಿ ಶ್ರೀಮತಿ ಹಣಮಂತಿ ಹಾಗೂ ವಲಯದ ಮೇಲ್ವಿಚಾರಕ್ಕೆ ಶ್ರೀಮತಿ ಮಲ್ಲಮ್ಮ ಅಮೃತ್ ಬಂದರವಾಡ ಅವರೊಂದಿಗೆ ಕಾರ್ಯಕ್ರಮದ ಅನುಷ್ಠಾನ ಕುರಿತು ಚರ್ಚಿಸಿತು.

ಆನಂತರ ಮುಷ್ಟೂರು 2ನೇ ಅಂಗನವಾಡಿ ಕೇಂದ್ರದಲ್ಲಿ ನಡೆದ ಪಾಲಕ–ಪೋಷಕರ ಸಭೆಯನ್ನು ವಿಕ್ಷೀಸಿದರು, ಮತ್ತು ಯೋಜನೆ ಮಟ್ಟದ ಅಧಿಕಾರಿಗಳಾದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮೇಲ್ವಿಚಾರಕರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳಾದ ಉಪನಿರ್ದೇಶಕರು, ಜಿಲ್ಲಾ ನಿರೂಪಣಾಧಿಕಾರಿಗಳು ಹಾಗೂ ಕಲಿಕೆ–ಟಾಟಾ ಟ್ರಸ್ಟ್ ತಂಡದೊಂದಿಗೆ ಕಾರ್ಯಕ್ರಮದ ಕಾರ್ಯತಂತ್ರದ ಬಗ್ಗೆ ಚರ್ಚಿಸಿತು.

ಚರ್ಚೆಯಲ್ಲಿ ಜಿಲ್ಲಾ ನಿರೂಪಣಾಧಿಕಾರಿಗಳಾದ ಗುರುರಾಜ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ದೀಪಿಕಾ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ನರೇಂದ್ರರೆಡ್ಡಿ, ಯಾದಗಿರಿ ಯೋಜನೆಯ ಮೇಲ್ವಿಚಾರಕಿಯರು, ಕಲಿಕೆ–ಟಾಟಾ ಟ್ರಸ್ಟ ಯೋಜನೆ ನಿರ್ದೇಶಕರಾದ ಗಿರೀಶ್, ಕಾರ್ಯಕ್ರಮ ಅಧಿಕಾರಿಗಳಾದ ಕೊಟ್ರೇಶ್, ಕಾರ್ಯಕ್ರಮ ಸಯೋಜಕಾರದ ಶ್ರೀಮತಿ ಶಾಂತ, ಮುದ್ದೇಶ ಹಾಗೂ ಮಕ್ಕಳ ಜಾಗೃತಿ ತಂಡದಿಂದ ಅನಿಲ್ ಕುಮಾರ, ಸುಮಂತ್, ರಾಜೇಶ್ವರಿ, ಸದಾಶಿವ ರವರು ಭಾಗಿಯಾಗಿದ್ದರು.

# ಡಾ.ವಾಘಮಾರೆ ಅವರಿಂದ ಡಿ.ಕೆ.ಶಿವಕುಮಾರ ರವರಿಗೆ ಕೃತಜ್ಞತೆಗಳು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹಾಗೂ ಹಿಂದುಳಿದ ವಿಭಾಗದ ಅಧ್ಯಕ್ಷ ಎಸ್. ಮಧು ಬಂಗಾರಪ್ಪರವರ ಅನುಮೋಧನೆ ಮೇರೆಗೆ ನನ್ನನ್ನು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರಾಗಿ ಶೀಘ್ರವೇ



ಜಾರಿಗೆ ಬರುವಂತೆ ನೇಮಿಸಿದಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ, ಸಚಿವರಾದ ಈಶ್ವರ ಖಂಡ್ರೆ, ರಹೀಂಖಾನ್, ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಭೀಮರಾವ ಪಾಟೀಲ, ಡಿಸಿಸಿ ಅಧ್ಯಕ್ಷ ಮುಖಂಡ ಬಸವರಾಜ ಜಾಬಶೆಟ್ಟಿ, ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ್ ಹಾಗೂ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಿಗೆ,ಅಭಿಮಾನಿಗಳಿಗೆ ಡಾ.ಸಿದ್ರಾಮಾ ವಾಘಮಾರೆ ಕೃತಜ್ಞತೆ ಸಲ್ಲಿಸಿದ್ದಾರೆ.

# ಕಂದಾಯ ಸಚಿವ ಕೃಷ್ಣ ಭೈರೇಗೌಡ ಭರವಸೆ

## ಬಸವ ಅಂತಾರಾಷ್ಟ್ರೀಯ ಕೇಂದ್ರದ ಕಾಮಗಾರಿ ಶೀಘ್ರ ಪೂರ್ಣ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14– ಕೋವಿಡ್ ಹಾಗೂ ಕೆಲ ತಾಂತ್ರಿಕ ಕಾರಣಗಳಿಂದ ವಿಳಂಬವಾಗಿರುವ ಕೂಡಲ ಸಂಗಮದ ಬಸವ ಅಂತಾರಾಷ್ಟ್ರೀಯ ಕೇಂದ್ರದ ಕಾಮಗಾರಿಯನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿದ್ದಾರೆ.

ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಅಧಿವೇಶನದಲ್ಲಿ ಬುಧವಾರ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೂಡಲ ಸಂಗಮದಲ್ಲಿ ದೆಹಲಿಯ ಅಕ್ಷರಧಾಮ ಮಾದರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಬಸವ ಅಂತಾರಾಷ್ಟ್ರೀಯ ಕೇಂದ್ರದ ಕಾಮಗಾರಿ ಕೋವಿಡ್ –2019 ಹಾಗೂ ಇನ್ನಿತರ ತಾಂತ್ರಿಕ ಕಾರಣಗಳಿಂದ ವಿಳಂಬವಾಗಿದೆ ಎಂದು ಹೇಳಿದರು.

ಈಗಾಗಲೇ ಮ್ಯೂಜಿಯಂ ನಿರ್ಮಾಣ ಕಾಮಗಾರಿಯ ಎ.ಬಿ.ಸಿ ಮತ್ತು ಎಫ್ ಬ್ಲಾಕಗಳ ಕಾಮಗಾರಿ ಮುಗಿದಿದೆ. ಉಳಿದ ಡಿ ಮತ್ತು ಇ ಬ್ಲಾಕಗಳ ಕಾಮಗಾರಿ ಪೂರ್ಣಗೊಳಿಸಲು ಕೆಬಿಜೆಎನ್ಎಲ್ ವ್ಯವಸ್ಥಾಪಕ ನಿರ್ದೇಶಕರಿಂದ ಅಂದಾಜು ಪ್ರತಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಸಮಾಲೋಚಕರಿಂದ ವಿಸ್ತೃತ ವಿನ್ಯಾಸ ವರದಿ ನಿರೀಕ್ಷಿಸಲಾಗುತ್ತಿದೆ.

ಜೊತೆಗೆ ಕೇಂದ್ರದಲ್ಲಿ ಬಸವಣ್ಣನವರ ಜೀವನ, ಹೋರಾಟ ಹಾಗೂ ವಚನಗಳ ತತ್ವ ಸಂದೇಶಗಳನ್ನು ಸಾರುವಂತಹ ಕಲಾಕೃತಿಗಳನ್ನು ರಚನೆ ಮಾಡುವ ಕಾಮಗಾರಿಯೂ ಬಾಕಿಯಿದ್ದು, ಈ ಕುರಿತು ತಜ್ಞರ ವರದಿಯನ್ನು ನಿರೀಕ್ಷಿಸಲಾಗುತ್ತಿದೆ ಎಂದು ಹೇಳಿದ ಸಚಿವ ಭೈರೇಗೌಡ, ಸದರಿ ವರದಿಗಳು ಲಭ್ಯವಾದ ಕೂಡಲೇ ಬಸವ ಅಂತಾರಾಷ್ಟ್ರೀಯ ಕೇಂದ್ರದ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಉತ್ತರಿಸಿದರು.

ಬಸವ ಅಂತಾರಾಷ್ಟ್ರೀಯ ಕೇಂದ್ರ ನಿರ್ಮಾಣ ಕಾಮಗಾರಿ ಆಮೆಗತಿಯಲ್ಲಿ ಸಾಗಿದ್ದು, ಸರ್ಕಾರ ಯಾವ ಕ್ರಮ ಕೈಗೊಂಡಿದೆ ಎಂದು ಪಿ.ಎಚ್.ಪೂಜಾರ ಪ್ರಶ್ನೆ ಕೇಳಿದ್ದರು.


# ಬಿಜೆಪಿಯಿಂದ ಮೌನ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಪಟ್ಟಣದಲ್ಲಿ ಬಿಜೆಪಿ ಪಕ್ಷದ ವತಿಯಿಂದ ವಿಭಜನೆ ವಿಭೀಷಣ ಸ್ಮೃತಿ ದಿವಸದ ಅಂಗವಾಗಿ ಅಂಬೇಡ್ಕರ್ ವೃತ್ತದಿಂದ ಮಹಾತ್ಮ ಗಾಂಧಿ ವೃತ್ತದವರೆಗೆ ಮೌನ ಮೆರವಣಿಗೆ ನಡೆಸಲಾಯಿತು. ತಾಲೂಕು ಘಟಕದ ಅಧ್ಯಕ್ಷ ವೀರಣ್ಣ ಕಾರಬಾರಿ ಪ್ರಮುಖರಾದ ಚನ್ನಬಸವಣ್ಣ ಬಳತೆ, ಸೂರಜ್ ಸಿಂಗ್ ರಜಪೂತ್ ಸೇರಿದಂತೆ ಅನೇಕ ಜನ ಕಾರ್ಯಕರ್ತರು ಪಾಲ್ಗೊಂಡಿದ್ದರು.

## ಸಚಿವ ರಾಜಣ್ಣ ವಜಾ: ವಾಲ್ಮೀಕಿ ನಾಯಕ ಮಹಾಸಭಾ ಖಂಡನೆ
## ಸಮುದಾಯಕ್ಕೆ ಕಾಂಗ್ರೆಸ್ ಅನ್ಯಾಯ: ಡಾ|| ಪಾಟೀಲ್ ಎಚ್ಚರಿಕೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಒಂದು ಹೇಳಿಕೆಯನ್ನೇ ಗಂಭೀರವಾಗಿ ಪರಿಗಣಿಸಿ ಯಾವುದೇ ರೀತಿಯ ನೋಟೀಸ್ ನೀಡದೇ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರನ್ನು ವಜಾ ಮಾಡಿರುವುದು ಖಂಡನೀಯವಾಗಿದೆ. ಈ ಸರಕಾರದಲ್ಲಿ ಇಬ್ಬರು ವಾಲ್ಮೀಕಿ ನಾಯಕ ಸಮಾಜದ ಸಚಿವರನ್ನು ವಜಾಗೊಳಿಸಿ ಕಾಂಗ್ರೆಸ್ ಪಕ್ಷ ಎಸ್‌ಟಿ ಸಮುದಾಯಕ್ಕೆ ಅನ್ಯಾಯ ಮಾಡಿದೆ. ವಜಾಗೊಂಡ ಸಚಿವರನ್ನು ಪುನಃ ಸಂಪುಟಕ್ಕೆ ಸೇರಿಸಿಕೊಳ್ಳಬೇಕು. ಇಲ್ಲದಿದ್ದರೆ ಇಬ್ಬರು ನಮ್ಮ ಸಮುದಾಯದ ಶಾಸಕರನ್ನೇ ಸಚಿವರನ್ನಾಗಿ ಮಾಡಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ನಾವು ಕಾಂಗ್ರೆಸ್ ವಿರುದ್ಧ ಹೋರಾಟಕ್ಕಿಳಿಯಬೇಕಾಗುತ್ತದೆ ಎಂದು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಕೊಪ್ಪಳ ಜಿಲ್ಲಾಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಡಾ|| ಕೆ.ಎನ್,ಪಾಟೀಲ್, ನಿಕಟಪೂರ್ವ ಜಿಲ್ಲಾಧ್ಯಕ್ಷ ಟಿ.ರತ್ನಾಕರ್ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿ ನಡೆಸಿ ಅವರು ಮಾತನಾಡಿದರು. ವಾಲ್ಮೀಕಿ ನಾಯಕ ಸಮುದಾಯಕ್ಕೆ ಸೇರಿರುವ ಕೆ.ಎನ್.ರಾಜಣ್ಣ ಅವರು ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದ ನಾಯಕರಾಗಿದ್ದಾರೆ. ಹಾಸನ ಉಸ್ತುವಾರಿ ಸಚಿವರಾಗಿ ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೆರಿಸಿ ಅಭಿವೃದ್ಧಿ ಕಾರ್ಯ ಮಾಡಿದ್ದಾರಲ್ಲದೇ ದೇವೇಗೌಡರ ಪ್ರಭಾವದಲ್ಲೂ 30 ವರ್ಷಗಳ ನಂತರ ಹಾಸನ ಲೋಕಸಭೆಗೆ ಕಾಂಗ್ರೆಸ್ ಅಭ್ಯರ್ಥಿಯನ್ನು ಆರಿಸಿಕೊಂಡು ಬಂದಿದ್ದಾರೆ. ಅವರು ನೇರ, ನಿಷ್ಟುರ ವ್ಯಕ್ತಿಯಾಗಿದ್ದಾರೆ. ಇತ್ತೀಚಿಗೆ ಅವರು ಕಾಂಗ್ರೆಸ್ ಹೈಕಮಾಂಡ್ ನಿರ್ಧಾರದ ವಿರುದ್ಧವಾಗಿ ನೀಡಿರುವ ಹೇಳಿಕೆಯೊಂದನ್ನೆ ಗಂಭೀರವಾಗಿ ಪರಿಗಣಿಸಿ ಸಚಿವ ಸ್ಥಾನದಿಂದ ವಜಾಗೊಳಿಸಿರುವ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಸಮಸ್ಥ ವಾಲ್ಮೀಕಿ ನಾಯಕ ಸಮುದಾಯಕ್ಕೆ ಅನ್ಯಾಯ ಮಾಡಿದೆ. ಮುಖ್ಯಮಂತ್ರಿಗಳು ಮತ್ತು ಸಂಪುಟದ ಸಚಿವರಿಗೂ ತಿಳಿಯದಂತೆ ನೇರವಾಗಿ ರಾಜ್ಯಪಾಲರ ಕಚೇರಿಯಿಂದ ವಜಾಗೊಳಿಸಿದ್ದು ನಮಗೆ ನೋವ್ವಾಗಿದೆ. ತಪ್ಪುಗಳು ಮಾಡಿದಾಗ ನೋಟೀಸ್ ನೀಡಿ ಪುನರಾವರ್ತನೆಯಾಗದಂತೆ ಎಚ್ಚರಿಕೆ ನೀಡಬೇಕು. ಹಲವು ಸಚಿವರು, ಶಾಸಕರು ಪಕ್ಷದ ವಿರುದ್ಧ ಮಾತನಾಡಿದವರಿಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಆದರೆ ಏಕಾ ಏಕಿ ರಾಜಣ್ಣ ಅವರನ್ನು ವಜಾಗೊಳಿಸಿರುವುದು ಎಸ್‌ಟಿ ಸಮುದಾಯವನ್ನು ಮೂಲೆ ಗುಂಪು ಮಾಡುವ ಹುನ್ನಾರವಾಗಿದೆ. ಸಚಿವ ಜಾರಕಿಹೊಳಿ ನೇತೃತ್ವದಲ್ಲಿ ಸಮುದಾಯದ ಶಾಸಕರ ನಿಯೋಗ ಹೈಕಮಾಂಡ್ ಭೇಟಿ ಮನವಲಿಸುವ ಪ್ರಯತ್ನ ಮಾಡಲಿದ್ದಾರೆ. ಇದಕ್ಕೆ ಒಪ್ಪದಿದ್ದರೆ ರಾಜ್ಯಾದ್ಯಂತ ಸಮುದಾಯ ಕಾಂಗ್ರೆಸ್ ವಿರುದ್ಧ ಹೋರಾಟ ಮಾಡಲಿದ ಎಂದರು.

ಗೋಷ್ಟಿಯಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾ ಧರ್ಮದರ್ಶಿ ಹಾಗೂ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ರಾಮಣ್ಣ ಕಲ್ಲಣ್ಣವರ, ಕುಷ್ಟಗಿ ತಾಲೂಕು ಅಧ್ಯಕ್ಷ ಮಾನಪ್ಪ ತಾಳೂರು, ನಗರಸಭೆ ನಾಮ ನಿರ್ದೇಶಿತ ಸದಸ್ಯ ಚನ್ನಪ್ಪ ಹಂಚಿನಾಳ ಇದ್ದರು.

## ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ ಅವರಿಗೆ ಉತ್ತಮ ಕಾರ್ಯ ಸಾಧನೆಗಾಗಿ ರಾಜ್ಯ ಸರ್ಕಾರದಿಂದ ಮತ್ತೊಂದು ಅಭಿನಂದನಾ ಪತ್ರ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 14–ರಾಯಚೂರ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಉತ್ತಮ ಕಾರ್ಯ ಸಾಧನೆ ಮಾಡಿದ್ದರಿಂದಾಗಿ ಕಂದಾಯ ಇಲಾಖೆಯ ಆಯುಕ್ತರು ಅಭಿನಂದನಾ ಪತ್ರ ಕಳುಹಿಸಿದ್ದಾರೆ.

ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿ ರಾಜ್ಯದ ಸಾರ್ವಜನಿಕರಿಗೆ ವಿವಿಧ ಪ್ರಮಾಣ ಪತ್ರಗಳ ಸೇವೆಯನ್ನು ನೀಡಲು ರಾಯಚೂರು ಜಿಲ್ಲೆಯ ನಾಡ ಕಚೇರಿಗಳಲ್ಲಿ ಜುಲೈ–2025ರ ಮಾಹೆಯಲ್ಲಿ ಸ್ವೀಕರಿಸಲಾಗಿರುವ 48,649 ಅರ್ಜಿಗಳನ್ನು ನಿಗದಿತ ಅವಧಿಗಿಂತ ಮೊದಲೇ ಶೇ.99.61ರಷ್ಟು ವಿಲೇವಾರಿ ಮಾಡಿ 5.32 ಸಿಗ್ಮಾ ಮೌಲ್ಯವನ್ನು ಪಡೆದಿರುತ್ತೀರಿ. 7.10 ವಿಲೇವಾರಿ ಸೂಚ್ಯಂಕದ ಪ್ರಕಾರ ತಮ್ಮ ಜಿಲ್ಲೆಯಲ್ಲಿ 8.10 ಪಟ್ಟು ನಿಗದಿತ ಅವಧಿಗಿಂತ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಿ ಜುಲೈ–2025ರ ಮಾಹೆಯಲ್ಲಿ ತಮ್ಮ ರಾಯಚೂರು ಜಿಲ್ಲೆಯು ರಾಜ್ಯ ಮಟ್ಟದಲ್ಲಿ ತೃತೀಯ ಸ್ಥಾನ ಪಡೆದಿರುವುದು ಶ್ಲಾಘನೀಯವಾಗಿದೆ.

ನಿಮ್ಮ ರಾಯಚೂರು ಜಿಲ್ಲೆಯಲ್ಲಿನ ಈ ಕಾರ್ಯ ಸಾಧನೆಗೆ ನಿಮ್ಮ ಹಾಗೂ ನಿಮ್ಮ ನಾಡಕಚೇರಿ ಅಥವಾ ಅಟಲ್‌ಜೀ ಜನಸ್ನೇಹಿ ಕೇಂದ್ರದ ಸಿಬ್ಬಂದಿಗಳ ಸಹಕಾರ, ಕಾರ್ಯತತ್ಪರತೆ ಕಾರಣವಾಗಿರುತ್ತದೆ. ಅದ್ದರಿಂದ ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯದ ಪರವಾಗಿ ನಿಮ್ಮ ತಂಡಕ್ಕೆ ನನ್ನ ಅಭಿನಂದನೆಯನ್ನು ವ್ಯಕ್ತಪಡಿಸಲು ಇಚ್ಛಿಸುತ್ತೇನೆ. ಇನ್ನು ಮುಂದಿನ ದಿನಗಳಲ್ಲಿಯು ಸಹ ನಿಮ್ಮಿಂದ ಇದೇ ರೀತಿಯ ಸಹಕಾರ ಹಾಗೂ ಕಾರ್ಯಕ್ಷಮತೆಯನ್ನು ನಿರೀಕ್ಷಿಸುತ್ತೇನೆ ಎಂದು ಕಂದಾಯ ಇಲಾಖೆಯ ಆಯುಕ್ತರಾದ ಪೊಮ್ಮಲ ಸುನೀಲ್‌ಕುಮಾರ್ ಅವರು ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರಿಗೆ ಅಭಿನಂದನೆ ತಿಳಿಸಿದ್ದಾರೆ.

ರಾಯಚೂರ ಜಿಲ್ಲೆಯಲ್ಲಿ ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಯಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಿರುವುದಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರಿಗೆ ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಕಳೆದ ಜುಲೈ ಮಾಹೆಯಲ್ಲಿ ಅಭಿನಂದನಾ ಪತ್ರ ಕಳುಹಿಸಿದ್ದರು.

### 38 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

## ಮಹಾಲಿಂಗಪುರ ಪಿಕೆಪಿಎಸ್‌ಗೆ 40.24 ಲಕ್ಷ ನಿವ್ವಳ ಲಾಭ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14–ಜಿಲ್ಲೆಯ ಮಹಾಲಿಂಗಪುರ ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ಕಳೆದ ಮಾರ್ಚ ಅಂತ್ಯಕ್ಕೆ 40.24 ಲಕ್ಷ ರೂ.ಗಳ ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ, ಬಿಡಿಸಿಸಿ ಬ್ಯಾಂಕಿನ ನಿರ್ದೇಶಕ ಬಸನಗೌಡ ಪಾಟೀಲ ತಿಳಿಸಿದರು.

ಸಂಘದ ಆವರಣದಲ್ಲಿ ಜರುಗಿದ 66ನೇ ವಾರ್ಷಿಕ ಸರ್ವಸಾಧಾರಣ ಮಹಾಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಸದಾ ರೈತರ ಹಿತ ಕಾಯುತ್ತ ಅಭಿವೃದ್ಧಿಗೆ ಶ್ರಮಿಸುತ್ತಿರುವ ಸಂಘವು ಹಲವಾರು ರೈತಪರ ಯೋಜನೆ, ಸಹಾಯಧನ ಮತ್ತು ಸಾಲ ವಿತರಣೆಯ ನಂತರವೂ ಉತ್ತಮ ಲಾಭ ಮಾಡಿದೆ ಎಂದರು.

ಸಂಘದ ಮುಖ್ಯಕಾರ್ಯನಿರ್ವಾಹಕ ಈರಣ್ಣ ಬೆಟಗೇರಿ ವಾರ್ಷಿಕ ವರದಿಯನ್ನು ವಾಚಿಸಿ, ಸಂಘವು 2521 ಸದಸ್ಯರನ್ನು ಹೊಂದಿದೆ. 18,90,1061 ಶೇರು ಬಂಡವಾಳ, 22,54,77,625 ರೂ ಒಟ್ಟು ದುಡಿಯುವ ಬಂಡವಾಳ ಹೊಂದಿದೆ. ಸಂಘದಿಂದ ಟ್ರಾಕ್ಟರ್, ನೇಕಾರಿಕೆ, ಬಿನ್ನಶೇತ್ಕಿ, ದ್ವಿಚಕ್ರ ವಾಹನ, ಮುದ್ದತ ಠೇವು, ಪೈಪಲೈನ್, ವೇತನ, ಜಾಮೀನ, ತೋಟಗಾರಿಕೆ, ಹೈನುಗಾರಿಕೆ ಸೇರಿದಂತೆ 12 ವಿಭಾಗಗಳಲ್ಲಿ ಒಟ್ಟು 1886 ಜನರಿಗೆ 15.8 ಕೋಟಿ ರೂಗಳ ಸಾಲವನ್ನು ವಿತರಿಸಲಾಗಿದೆ. ಸ್ವಂತ ಬಂಡವಾಳದ ಮೂಲಕ 10.51 ಕೋಟಿ ರೂ.ಗಳ ಸಾಲ ವಿತರಿಸಿದೆ ಎಂದು ಹೇಳಿದರು.

ಸಾಲ ಪಡೆದ ಪ್ರತಿಯೊಬ್ಬ ರೈತರನ್ನು ಪಿಎಂಎಸ್‌ಬಿವೈ ಯೋಜನೆಯಡಿಯಲ್ಲಿ ವಾರ್ಷಿಕ 20 ರೂ. ಪಾವತಿಯೊಂದಿಗೆ 2 ಲಕ್ಷ ಅಪಘಾತ ವಿಮೆಗೆ ಒಳಪಡಿಸಲಾಗಿದೆ. ಪ್ರಸಕ್ತ ವರ್ಷ ಪ್ರತಿಶತ 8 ರಷ್ಟು ಲಾಭಾಂಶವನ್ನು ವಿತರಿಸಲು ನಿರ್ಧರಿಸಲಾಗಿದೆ. ರೈತರು ಸಕಾಲಕ್ಕೆ ಸಾಲವನ್ನು ಮರುಪಾವತಿಸುವದು ಮತ್ತು ಹೆಚ್ಚಿನ ಠೇವಣಿಗಳನ್ನು ಇಡುವ ಮೂಲಕ ಸಂಘದ ಅಭಿವೃದ್ಧಿಗೆ ಸಹಕರಿಸುವಂತೆ ಕೋರಿದರು.

ಸಭೆಯಲ್ಲಿ 28ಕ್ಕೂ ಹೆಚ್ಚು ವಿಷಯಗಳನ್ನು ಚರ್ಚಿಸಿ, ಸರ್ವಾನುಮತದ ಠರಾವು ಪಾಸ ಮಾಡಲಾಯಿತು. ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ ಮುಗಿಸಿದ ಪಟ್ಟಣದ ಪ್ರತಿಭಾನ್ವಿತ 38 ಬಡ ವಿದ್ಯಾರ್ಥಿಗಳಿಗೆ ತಲಾ 2 ಸಾವಿರದಂತೆ ಶೈಕ್ಷಣಿಕ ಸಹಾಯಧನ ನೀಡಿ ಸನ್ಮಾನಿಸಿಸಲಾಯಿತು.

ಸಂಘದ ಉಪಾಧಕ್ಷ ಮಹಾಲಿಂಗಪ್ಪ ಪೂಜಾರಿ, ನಿರ್ದೇಶಕರಾದ ಅಶೋಕಗೌಡ ಪಾಟೀಲ, ಮಲ್ಲಿಕಾರ್ಜುನ ಕುಳ್ಳೊಳ್ಳಿ, ವಿಷ್ಣುಗೌಡ ಪಾಟೀಲ, ಶಿವಪ್ಪ ನಾಗನೂರ, ಬಸವರಾಜ ಅರಳಿಕಟ್ಟಿ, ಈರಪ್ಪ ದಿನ್ನಿಮನಿ, ಶಿವಲಿಂಗ ಘಂಟಿ, ಹಣಮಂತ ಬುರುಡ, ಸಂಗಪ್ಪ ಡೋಣಿ, ಶೈಲಾ ಪವಾರ, ಸುರೇಖಾ ಸೈದಾಪೂರ, ಡಿಸಿಸಿ ಬ್ಯಾಂಕಿನ ಪ್ರತಿನಿಧಿ ಎಸ್.ಆಯ್.ಸೋರಗಾಂವಿ ಸೇರಿದಂತೆ ಸಿಬ್ಬಂದಿ ಹಾಗೂ ನೂರಾರು ರೈತರು ವಾರ್ಷಿಕ ಸಭೆಯಲ್ಲಿ ಭಾಗವಹಿಸಿದ್ದರು.

## ಧ್ವಜಾರೋಹಣದಲ್ಲಿ ಭಾಗವಹಿಸಲು ಮುಖ್ಯಾಧಿಕಾರಿ ಹುಸಾಮುದ್ದೀನ್ ಮನವಿ



ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪುರಸಭೆಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಪಟ್ಟಣದ ಗಣ್ಯ ವ್ಯಕ್ತಿಗಳು, ಪುರಸಭೆ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು. ಸದಸ್ಯರು ಮತ್ತು ಸಾರ್ವಜನಿಕರು ಪಟ್ಟಣದ ಪುರಸಭೆಯಲ್ಲಿ ಇಂದು ಬೆಳಿಗ್ಗೆ 7:45 ಘಂಟೆಗೆ 79ನೇಯ ಸ್ವಾತಂತ್ರೋತ್ಸವದ ಧ್ವಜಾರೋಹಣ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಧ್ವಜಾರೋಹಣ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು

# ಮಲ್ಲಯ್ಯಗಿರಿಯಲ್ಲಿ ಇಂದು ಸತ್ಸಂಗ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ತೇಲಂಗಾಣ ರಾಜ್ಯದ ಜಹೀರಾಬಾದ ತಾಲ್ಲೂಕಿನ ಮಲ್ಲಯ್ಯಗಿರಿ ಆಶ್ರಮದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಆ.15 ರಂದು ಸತ್ಸಂಗ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಾಂಗ್ರೆಸ್ ಪಕ್ಷದ ರಾಜ್ಯ ಹಿಂದುಳಿದ ವರ್ಗದ ರಾಜ್ಯ ಉಪಾಧ್ಯಕ್ಷರಾದ ಡಾ.ಸಿದ್ರಾಮ್ ವಾಘಮಾರೆ ತಿಳಿಸಿದ್ದಾರೆ. ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಬಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

### ಅಪಾಯದ ಅಂಚಿನಲ್ಲಿರುವ ಘಾತಿಮಾಪುರ್ ಸರ್ಕಾರಿ ಶಾಲೆ

## ಜೀವ ಕೈಯಲ್ಲಿ ಹಿಡಿದುಕೊಂಡು ಶಾಲೆಗೆ ಬರುತ್ತಿರುವ ವಿದ್ಯಾರ್ಥಿಗಳು




(ರಾಜಕುಮಾರ ಆರ್.ಹಡಪದ)

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಪಟ್ಟಣದ ಘಾತಿಮಾಪುರ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಅಪಾಯದ ಅಂಚಿನಲಿದ್ದು ವಿದ್ಯಾರ್ಥಿಗಳು ತಮ್ಮ ಜೀವ ಕೈಯಲ್ಲಿ ಹಿಡಿದುಕೊಂಡು ವಿದ್ಯಾಭ್ಯಾಸ ಮಾಡುವ ಪ್ರಸಂಗ ಜರುಗುತ್ತಿದೆ. ಸರ್ಕಾರಿ ಶಾಲೆಯಲ್ಲಿ ಓದುವ ಮಕ್ಕಳು ರೈತರ, ಕೂಲಿ ಕಾರ್ಮಿಕರ ಕಡು ಬಡ ಕುಟುಂಬದಿಂದ ಬಂದ ಮಕ್ಕಳೇ ಈ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುತ್ತಿದ್ದರೆ. ಘಾತಿಮಾಪುರ್ ಗ್ರಾಮದಲ್ಲಿ ಸುಮಾರು 600 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿದ್ದು. ಚಿಟಗುಪ್ಪ ನಗರದಿಂದ ಈ ಗ್ರಾಮವೂ 2 ಕಿಲೋ ಮೀಟರ್ ದೂರದಲ್ಲಿದೆ. ಹೀಗಾಗಿ ಘಾತಿಮಾಪುರ್ ಗ್ರಾಮದ ಬಡ ಮಕ್ಕಳು ಸರ್ಕಾರಿ ಶಾಲೆಯನ್ನೇ ನಂಬಿಕೊಂಡು ತಮ್ಮ ಬದುಕು ಕಟ್ಟಿಕೊಳ್ಳುತ್ತಿದ್ದಾರೆ. ಬಡ ಪಾಲಕರಿಗೆ ತಮ್ಮ ಮಕ್ಕಳು ವಿದ್ಯಾಭ್ಯಾಸ ರೂಪಿಸಬೇಕು ಎಂದು ಹರಸಾಹಸ ಪಡುತ್ತಿದ್ದಾರೆ. ಆದರೆ ಶಾಲೆಯ ಆವ್ಯವಸ್ಥೆ ನೋಡಿ ಶಾಲೆಗೆ ಮಕ್ಕಳನ್ನು ಕಳುಹಿಸಲು ಹಿಂದೆಟ್ಟು ಹಾಕುತ್ತಿದ್ದಾರೆ. ವಿದ್ಯಾರ್ಥಿಗಳ ಜೀವದ ಜೊತೆಯಲ್ಲಿ ಅಲ್ಲದೇ ಶಿಕ್ಷಕರ ಜೀವವು ಆತಂಕದಲ್ಲಿದೆ ಎನ್ನಲಾಗಿದೆ. ಈ ಸಂಬಂಧ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಕ್ಷಣ ಈ ಶಾಲೆಗೆ ಭೇಟಿ ನೀಡಿ ಸರ್ಕಾರಿ ಶಾಲೆಯ ನೂತನ ಕೋಣೆಗಳನ್ನು ನಿರ್ಮಾಣ ಮಾಡಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದರು. ಚುನಾಯಿತ ಪ್ರತಿನಿಧಿಗಳು ಕೂಡ ಈ ಸರ್ಕಾರಿ ಶಾಲೆಯ ಕಡೆ ಗಮನ ಹರಿಸಿ ವಿದ್ಯಾರ್ಥಿಗಳ ಮತ್ತು ಶಿಕ್ಷಕರ ನೆರವಿಗೆ ಧಾವಿಸಬೇಕು ಎಂಬ ಮನವಿ ವಿದ್ಯಾರ್ಥಿಗಳದಾಗಿದೆ. ಕಳೆದ 8 ದಿವಸಗಳಿಂದ ಗ್ರಾಮದಲ್ಲಿ ಜಿಟಿ ಜಿಟಿ ಮಳೆ ಬರುತ್ತಿದ್ದು. ಯಾವಾಗ ಈ ಕೋಣೆಗಳು ನೆಲ ಸಮವಾಗುತ್ತವೆ ಎಂಬ ಅಂತಂಕದಲ್ಲಿ ಗ್ರಾಮಸ್ಥರು, ವಿದ್ಯಾರ್ಥಿಗಳು, ಶಿಕ್ಷಕರು ಕಾಲ ಕಳೆಯುತ್ತಿದ್ದಾರೆ. ಜಿಲ್ಲಾ ಆಡಳಿತವೂ ಈ ಸರ್ಕಾರಿ ಶಾಲೆಗೆ ಭೇಟಿ ನೀಡಿ ಇಲ್ಲಿನ ಮೂಲಭೂತ ಸೌಕರ್ಯ ಒದಗಿಸುವುದು ಅತೀ ಅವಶ್ಯಕವಾಗಿರುತ್ತದೆ.

# ಆಧಾರ ಕಾರ್ಡ್ ಕೇಂದ್ರ ವಿಸ್ತರಿಸುವ ಬಗ್ಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಪಟ್ಟಣದ ತಹಸೀಲ ಕಛೇರಿಯಲ್ಲಿ ಗುರುವಾರ ಭಗತ ಸಿಂಗ ಯುವ ಸೇನೆ ಸಂಘ ಕಮಲನಗರ ಘಟಕ ವತಿಯಿಂದ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಅವರಿಗೆ ಆಧಾರ ಕಾರ್ಡ್ ಕೇಂದ್ರ ವಿಸ್ತರಿಸುವ ಬಗ್ಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಸಿದ್ದು ಸೊನಳೆ, ಪಟ್ಟಣದಲ್ಲಿ ಏಕ ಮಾತ್ರ ಆಧಾರ್ ಕಾರ್ಡ್ ತಿದ್ದುಪಡಿ ಕೇಂದ್ರ ಇದ್ದು, ಇದರಿಂದ ಜನಸಾಮಾನ್ಯರಿಗೆ ತೊಂದರೆಯಾಗುತ್ತಿದ್ದು, ತಾವುಗಳು ಪಟ್ಟಣದಲ್ಲಿ ಇನ್ನೂ ಎರಡು ಮೂರು ಕೇಂದ್ರ ತೆರೆಯಲು ಪರವಣಿಗೆ ಕೊಟ್ಟರೆ ಜನರಿಗೆ ಅನುಕೂಲ ವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಪರಮೇಶ ಬಿರಾದಾರ, ಅಪ್ಪಾರಾವ ಪಾಟೀಲ, ಸುನಿಲ ಮೆಹತ್ರೆ, ವಿಶ್ವಜಿತ ಕಾಂಬಳೆ, ದೇವರಾಜ್ ಸಿಂಗ್ ಠಾಕೂರು ಸೇರಿದಂತೆ ಇನ್ನಿತರ ಇದ್ದರು.

### ಇಂದು ಗವಿ ವೀರಭದ್ರೇಶ್ವರ ಮೂರ್ತಿ ಪುನರ ಪ್ರತಿಷ್ಠಾಪನೆ

## ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರ ಸಾನಿಧ್ಯದಲ್ಲಿ ನಾನಾ ಕಾರ್ಯಕ್ರಮಗಳು ಜರುಗಲಿವೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಮೀನಕೇರಾ ಗ್ರಾಮದ ಗವಿ ವೀರಭದ್ರೇಶ್ವರರ ನೂತನ ಮೂರ್ತಿ ಪುನರಪ್ರತಿಷ್ಠಾಪನೆ ಕಾರ್ಯಕ್ರಮವೂ ಇಂದು ಶುಕ್ರವಾರ ಹಾರಕೂಡ ಸಂಸ್ಥಾನ ಹಿರೇಮಠದ ಡಾ. ಚನ್ನವೀರ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ ಜರುಗಲಿದೆ.

ಗುರುವಾರ ಬೆಳಗ್ಗೆ ಗ್ರಾಮದ ಹನುಮಾನ ಮಂದಿರದಿಂದ ವೀರಭದ್ರೇಶ್ವರರ ನೂತನ ಮೂರ್ತಿಯ ಭವ್ಯ ಮೆರವಣಿಗೆ ಸಡಗರ ಸಂಭ್ರಮದೊಂದಿಗೆ ನಡೆಯಿತು. ಮೆರವಣಿಗೆಯಲ್ಲಿ ತುಂಬಿದ ಕಳಶ ಹೊತ್ತ ಮಹಿಳೆಯರು, ವಿಜಯಕುಮಾರ ವಿಶ್ವಕರ್ಮ ಪುರವಂತರ ತಂಡದಿಂದ ವೀರಗಾಸಿ ಸೇವೆ, ರುದ್ರಕಾಶಿ ಸೇವೆ ಸೇರಿದಂತೆ ನಾನಾ ಸೇವೆಗಳು ಸೇರಿ ನಾನಾ ಕಲಾ ತಂಡಗಳು ಭಾಗವಹಿಸಿದವು. ನೂತನ ಮೂರ್ತಿ ವೀರಭದ್ರೇಶ್ವರ ಮಂದಿರ ತಲುಪಿದ ಬಳಿಕ ವೈದೀಕ ತಂಡದಿಂದ ನಾನಾ ಧಾರ್ಮಿಕ ಕಾರ್ಯಕ್ರಮಗಳು ಆರಂಭವಾದವು.

ಶುಕ್ರವಾರ ಬೆಳಗ್ಗೆ ಸಂಗೀತ ರುದ್ರಾಭಿಷೇಕ ದೊಂದಿಗೆ ನೂತನ ಗವಿ ವೀರಭದ್ರೇಶ್ವರರ ಮೂರ್ತಿ ಪುನರ್ ಪ್ರತಿಷ್ಠಾಪನೆ ಧಾರ್ಮಿಕ ವಿವಿಧಾನಗಳು ಜರುಗಲಿವೆ.

ಸಂಜೆ 4 ಗಂಟೆಗೆ ಹಾರಕೂಡದ ಸಂಸ್ಥಾನ ಹಿರೇಮಠದ ಡಾ. ಚನ್ನವೀರ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ ಪ್ರಾಣ ಪ್ರತಿಷ್ಠಾಪನೆ ಶಿಲ್ಪಿ ನೇತ್ರೋತ್ಮಿಲನ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಮಂದಿರದ ಪಂಚ ಕಮಿಟಿ ಅಧ್ಯಕ್ಷರು, ಸದಸ್ಯರು ಹಾಗೂ ಮೀನಕೇರಾ ಗ್ರಾಮದ ಸದ್ಭಕ್ತಾದಿಗಳು ಭಾಗವಹಿಸಲಿದ್ದಾರೆ.

# ಕೋರಿಕೆ ಬಸ್ ನಿಲ್ದಾಣದ ನಾಮಫಲಕ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಗುರುಮಿಠಕಲ್, ಆ,14. ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ಬರುವಂತಹ ವಿದ್ಯಾರ್ಥಿ ಗಳಿಗೆ ಅನುಕೂಲ ವಾಗುವ ದೃಷ್ಟಿಕೋನದಿಂದ ಯಾದಗಿರಿ ಟು ಹೈದ್ರಾಬಾದ್ ರಾಜ್ಯ ಹೆದ್ದಾರಿಗೆ ಹೊಂದುಕೊಂಡಂತೆ ಸರ್ಕಾರಿ ಪ್ರಥಮ ದರ್ಜೆ ಕ್ರಾಸ್ ಹತ್ತಿರ ಕೋರಿಕೆ ಬಸ್ ನಿಲ್ದಾಣ ನಾಮಫಲಕವನ್ನು ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಗೋವಿಂದ ಮೆಂಗಜಿ, ಪುರಸಭೆ ಸದಸ್ಯರಾದ ಅಶೋಕ ಕಲಾಲ್, ರವರು ಉದ್ಘಾಟನೆ ಮಾಡಿದರು ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಪುರುಷೋತ್ತಮ ಜೋಶಿ, ಸಹಾಯಕ ಪ್ರಾಧ್ಯಾಪಕರಾದ ಡಾ. ಬಾಬುರಾವ ದೊರೆ. ಉಪನ್ಯಾಸಕರಾದ ಡಾ. ಮರೆಪ್ಪ ನಟೇಕಾರ್. ಅಮರನಾಥ ಕಲಾಲ. ಕಾಲೇಜಿನ ಅಧಿಕ್ಷಕರಾದ ಸಿದ್ದಲಿಂಗಪ್ಪ ಅವಂಟಿ ಹಾಗು ಇನ್ನಿತರರು ಇದ್ದರು


ಮನ್ನಾಏಖೇಳ್ಳ ಗ್ರಾಮ ಪಂಚಾಯತ ವತಿಯಿಂದ ಸಮಸ್ತ ನಾಡಿನ ಜನತೆಗೆ
79ನೇ ಸ್ವಾತಂತ್ರ್ಯ ದಿನಾಚರಣೆಯ
ಶುಭಾಶಯಗಳು
ಶ್ರೀ ರಾಜಕುಮಾರ ಅಗಸಿ
ಅಧ್ಯಕ್ಷರು, ಗ್ರಾಮ ಪಂಚಾಯತ್
ಮನ್ನಾಏಖೇಳ್ಳಿ.
ಶ್ರೀಮತಿ ಮೈಮುನಾ ಬೇಗಂ
ಉಪಾಧ್ಯಕ್ಷರು, ಗ್ರಾಮ ಪಂಚಾಯತ್
ಮನ್ನಾಏಖೇಳ್ಳಿ
ಶ್ರೀಮತಿ ಭಾಗ್ಯಜ್ಯೋತಿ
ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್ ಮನ್ನಾಏಖೇಳ್ಳಿ.
ಸ್ವಚ್ಛತೆಗೆ ಪ್ರಥಮ ಆದ್ಯತೆ
ಶುಭಕೋರುವವರು : ಸರ್ವ ಸದಸ್ಯರು, ಸಿಬ್ಬಂದಿ ವರ್ಗ ಮನ್ನಾಏಖೇಳ್ಳಿ ಗ್ರಾಮ ಪಂಚಾಯತ್


ನಿರ್ಣಾ ಗ್ರಾಮ ಪಂಚಾಯತ ವತಿಯಿಂದ
ಸಮಸ್ತ ನಾಡಿನ ಜನತೆಗೆ
79ನೇ ಸ್ವಾತಂತ್ರ್ಯ ದಿನಾಚರಣೆಯ
ಹಾರ್ದಿಕ ಶುಭಾಶಯಗಳು
ಶ್ರೀಮತಿ ಗೀತಾ ಎಂ. ಜೋಗಣಿ
ಅಧ್ಯಕ್ಷರು
ಗ್ರಾಮ ಪಂಚಾಯತ್ ನಿರ್ಣಾ
ಶ್ರೀ ಸಂಜೀವಕುಮಾರ್ ಕಿರಣ
ಉಪಾಧ್ಯಕ್ಷರು
ಗ್ರಾಮ ಪಂಚಾಯತ್ ನಿರ್ಣಾ
ಶ್ರೀ ಬಸವರಾಜ ಗುಗ್ಗರಿ
ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್ ನಿರ್ಣಾ
ಶುಭಕೋರುವವರು :
ಸರ್ವ ಸದಸ್ಯರು, ಸಿಬ್ಬಂದಿ ವರ್ಗ ನಿರ್ಣಾ ಗ್ರಾಮ ಪಂಚಾಯತ್


ಕುರೇಕುಪ್ಪಾ ಪುರಸಭೆ ವತಿಯಿಂದ
ಸಮಸ್ತ ನಾಡಿನ ಜನತೆಗೆ
79ನೇ ಸ್ವಾತಂತ್ರ್ಯ ದಿನಾಚರಣೆಯ
ಶುಭಾಶಯಗಳು
ಶ್ರೀ ಈ.ತುಕಾರಂ
ಮಾನ್ಯ ಸಂಸದರು ಬಳ್ಳಾರಿ ಲೋಕಸಭಾ ಕ್ಷೇತ್ರ, ಬಳ್ಳಾರಿ
ಶ್ರೀ ಕೆ.ಕಲ್ಲುಗುಡೆಪ್ಪ
ಮಾನ್ಯ ಆಧ್ಯಕ್ಷರು ಪುರಸಭೆ
ಕುರೇಕುಪ್ಪ
ಶ್ರೀ ಸತೀಶ್ ಗುಡ್ಡೆ
ಮಾನ್ಯ ಮುಖ್ಯಾಧಿಕಾರಿಗಳು
ಪುರಸಭೆ ಕುರೇಕುಪ್ಪ
ಶ್ರೀಮತಿ ಜ್ಯೋತಿ ನಾರಾಯಾಣ
ಮಾನ್ಯ ಉಪಾಧ್ಯಕ್ಷರು ಪುರಸಭೆ
ಕುರೇಕುಪ್ಪ
ಶ್ರೀಮತಿ ಅನ್ನಪೂರ್ಣ ತುಕಾರಂ
ಮಾನ್ಯ ಶಾಸಕರು ಸಂಡೂರು ವಿಧಾನಸಭಾ ಕ್ಷೇತ್ರ, ಸಂಡೂರು
ಶುಭಕೋರುವವರು : ಸರ್ವ ಸದಸ್ಯರು, ಸಿಬ್ಬಂದಿ ವರ್ಗ, ಕುರೇಕುಪ್ಪಾ ಪುರಸಭೆ

# ದೇಶ ವಿಭಜನೆಯ ವಿಭೀಷಣ ಸ್ಮೃತಿ ದಿನ ಬಿಜೆಪಿಯಿಂದ ಮೌನ ಮೆರವಣಿಗೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14–ನಗರದಲ್ಲಿ ಗುರುವಾರ ಭಾರತೀಯ ಜನತಾ ಪಕ್ಷದ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ವತಿಯಿಂದ ಹರ್ ಘರ್ ತಿರಂಗಾ ಅಭಿಯಾನದ ನಿಮಿತ್ತ ದೇಶ ವಿಭಜನೆ ವಿಭೀಷಣ ಸ್ಮೃತಿ ದಿವಸದ ಪ್ರಯುಕ್ತ ಮೌನ ಮೆರವಣಿಗೆ ನಡೆಸಲಾಯಿತು.

ನಂತರ ಮಾತನಾಡಿದ ಮಾಜಿ ಶಾಸಕ ವೀರಣ್ಣ ಚರಂತಿಮಠ, ದ್ವೇಷ, ಹಿಂಸಾಚಾರದಿಂದ ದೇಶದ ಲಕ್ಷಾಂತರ ಸಹೋದರ, ಸಹೋದರಿಯರು ನಿರಾಶ್ರಿತರಾಗಿ ಜೀವ ಕಳೆದುಕೊಂಡ ನೋವು ಎಂದಿಗೂ ಮಾಸದು. ನಮ್ಮ ಜನರ ಹೋರಾಟ, ತ್ಯಾಗದ ಸ್ಮರಣೆಯ ದಿನವಾದ ದೇಶ ವಿಭಜನೆಯ ದಿನವನ್ನು ಮರೆಯಲು ಸಾಧ್ಯವಿಲ್ಲ, ಅಗಸ್ಟ್ 14 ದೇಶ ವಿಭಜನೆಯ ಕರಾಳ ಸ್ಮರಣಾ ದಿನವಾಗಿದೆ ಎಂದರು.

ಬೀಳೂರು ಅಜ್ಜನ ದೇವಸ್ಥಾನದಿಂದ ಪ್ರಾರಂಭವಾದ ಮೌನ ಮೆರವಣಿಗೆ ನಗರದ ಪ್ರಮುಖ ರಸ್ತೆಗಳ ಮೂಲಕ ಸಂಚರಿಸಿ ಬಸವೇಶ್ವರ ವೃತ್ತದಲ್ಲಿ ಮುಕ್ತಾಯಗೊಂಡಿತು. ಸಿ.ವಿ.ಕೋಟಿ, ಬಸವರಾಜ್ ಯಂಕಂಚಿ, ನಗರಸಭೆ ಅದ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ್, ಶಶಿಕಲಾ ಮಜ್ಜಗಿ, ಬಸವರಾಜ ಹುನಗುಂದ, ಸುರೇಶ ಕೊಣ್ಣೂರ, ರಾಜು ಮುದೇನೂರ, ಮಲ್ಲೇಶ ವಿಜಾಪುರ, ಕಲ್ಲಪ್ಪ ಭಗವತಿ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ಸುರೇಶ ಮಜ್ಜಗಿ ಸೇರಿದಂತೆ ಅನೇಕ ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಎಚ್‌ಐವಿ ಏಡ್ಸ್ ಬಗ್ಗೆ ಅರಿವು ಕಾರ್ಯಕ್ರಮ ಭಿತ್ತಿ ಚಿತ್ರ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14–ಅಂತರರಾಷ್ಟ್ರೀಯ ಯುವ ದಿನಾಚರಣೆ ಹಾಗೂ ಎಚ್.ಐವಿ ಏಡ್ಸ್ ತೀವ್ರಗೊಳಿಸಿದ ಅರಿವಿನ ಮಾಸಾಚರಣೆ ಹಿನ್ನೆಲೆಯಲ್ಲಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ಭಿತ್ತಿಚಿತ್ರ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ನಗರದ ಬವಿವ ಸಂಘದ ಶಿಕ್ಷಣ ಮಹಾವಿದ್ಯಾಲಯದಲ್ಲಿ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕದ ಸಹಯೋಗದಲ್ಲಿ ಹಮ್ಮಿಕೊಂಡ ಸಮಾರಂಭದಲ್ಲಿ ಜಿಲ್ಲಾ ಮಟ್ಟದ ಸ್ಪರ್ಧೆಯ ಪ್ರಶಸ್ತಿಗಳನ್ನು ವಿತರಿಸಲಾಯಿತು.

ಭಿತ್ತಿಚಿತ್ರ ಸ್ಪರ್ಧೆಯಲ್ಲಿ ಐಶ್ವರ್ಯ ಎಂ.ಕೆ. ಪ್ರಥಮ, ಕೀರ್ತನಾ ಎಂ.ಟಿ ದ್ವಿತೀಯ ಹಾಗೂ ಪ್ರತಿಭಾ ಹಡಪದ ತೃತೀಯ ಬಹುಮಾನ ಪಡೆದು–ಕೊಂಡರು.

ಪ್ರಶಸ್ತಿ ವಿತರಿಸಿ ಮಾತನಾಡಿದ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ.ಸುವರ್ಣಾ ಕುಲಕರ್ಣಿ, ಪ್ರತಿ ವರ್ಷ ಆಗಸ್ಟ 12 ರಂದು ಅಂತರರಾಷ್ಟ್ರೀಯ ಯುವ ದಿನಾಚರಣೆ ಆಚರಿಸಲಾಗುತ್ತಿದೆ. ರೋಗ ತಡೆಗಟ್ಟುವ ಶಕ್ತಿ ನಮ್ಮ ದೇಹದಲ್ಲಿರುವ ರೋಗ ನಿರೋಧಕ ಶಕ್ತಿಗಿದೆ. ಆ ಶಕ್ತಿಯನ್ನು ನಾವು ಕಾಪಾಡಿಕೊಳ್ಳಬೇಕು. ಎಚ್.ಐ.ವಿ, ಏಡ್ಸ್‌ದಂತಹ ಮಾರಕ ರೋಗಗಳಿಗೆ ತುತ್ತಾದರೆ ನಮ್ಮ ದೇಹದಲ್ಲಿರುವ ರೋಗ ನಿರೋಧಕ ಶಕ್ತಿಯನ್ನು ಕಡಿಮೆ ಮಾಡುತ್ತಾ ಹೋಗುತ್ತದೆ. ಇದರಿಂದ ದೇಹದಲ್ಲಿರುವ ಶಕ್ತಿ ಕಡಿಮೆಯಾಗಿ ಅನೇಕ ರೋಗಗಳಿಗೆ ತುತ್ತಾಗಬೇಕಾಗುತ್ತದೆ ಎಂದರು.

ಯುವ ಜನತೆ ಜಾಗೃತಿ ಹೊಂದಬೇಕಿದೆ ಅಂದಾಗ ಮಾತ್ರ ರೋಗ ಹರಡುವದನ್ನು ತಪ್ಪಿಸುವ ಮೂಲಕ ಆರೋಗ್ಯವಂತರಾಗಿ ಇದ್ದು, ದೇಶ ಕಟ್ಟು ಕಾರ್ಯ ಮಾಡಬೇಕು. ನಾವು ಬಲಿಷ್ಟರಾದಾಗ ಮಾತ್ರ ದೇಶ ಬಲಿಷ್ಟವಾಗಿರುತ್ತದೆ. ಇದನ್ನು ಅರಿತುಕೊಂಡು ಯುವ ಜನತೆ ತಮ್ಮಲ್ಲಿರುವ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವ ಕಾರ್ಯವಾಗಬೇಕು ಎಂದು ತಿಳಿಸಿದರು.

ಜಿಲ್ಲಾ ಏಡ್ಸ್ ಪ್ರತಿಬಂಧಕ ನಿಯಂತ್ರಣ ಘಟಕದ ಜಿಲ್ಲಾ ಮೇಲ್ವಿಚಾರಕ ಎಂ.ಎಚ್.ಸುಭೇದಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಬವಿವ ಸಂಘದ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ರಾಜೇಶ್ವರಿ ತೆಗ್ಗಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಕಾಂಬ್ಳೆ, ಆರ್.ಕೆ.ಕುಲಕರ್ಣಿ ಇತರರು ಉಪಸ್ಥಿತರಿದ್ದರು. ಬಸನಗೌಡ ಗೌಡರ ಸ್ವಾಗತಿಸಿದರು. ಸುನಿತಾ ಬನ್ನಟ್ಟಿ ವಂದಿಸಿದರು. ಅಕ್ಷತಾ ಉದಗಟ್ಟಿ ಕಾರ್ಯಕ್ರಮ ನಿರೂಪಿಸಿದರು.

## ಛಲವಾದಿ ಮುಖಂಡರ ಆರೋಪ

# ನ್ಯಾ.ನಾಗಮೋಹನದಾಸ್ ವರದಿ ನ್ಯಾಯ ಒದಗಿಸಿಲ್ಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14–ಇತ್ತೀಚಿಗೆ ನಡೆಸಲಾದ ಪರಿಶಿಷ್ಟ ಜಾತಿ ಗಣತಿ ಕಾರ್ಯ ಸರಿಯಾಗಿಲ್ಲ. ಆಯೋಗ ಸಮಾಜಕ್ಕೆ ಸರಿಯಾದ ರೀತಿಯಲ್ಲಿ ನ್ಯಾಯ ಒದಗಿಸಿಲ್ಲ. ರಾಜ್ಯದಲ್ಲಿ ಹೆಚ್ಚಿನ ಜನಸಂಖ್ಯೆ ಇರುವ ಛಲವಾದಿ ಸಮುದಾಯವನ್ನು ಕಡಿಮೆ ಸಂಖ್ಯೆಯಾಗಿ ತೋರಿಸಿದ್ದಾರೆ ಎಂದು ಛಲವಾದಿ ಮುಖಂಡರು ದೂರಿದ್ದಾರೆ. ನವನಗರದಲ್ಲಿ ಗುರುವಾರ ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟ ಹಮ್ಮಿಕೊಂಡಿದ್ದ ಪ್ರತಿಭಟನಾ ಮೆರವಣಿಯನ್ನು ಉದ್ದೇಶಿಸಿ ಮಾತನಾಡಿದ ಛಲವಾದಿ ಮುಖಂಡರುಗಳು, ಜಾತಿ ಜನಗಣತಿ ಪ್ರಾರಂಭದಲ್ಲಿ ಗಣತಿದಾರರು ಸರಿಯಾದ ರೀತಿಯಲ್ಲಿ ಗಣತಿ ಕಾರ್ಯ ಮಾಡಿಲ್ಲ. ನಮ್ಮ ಸಮುದಾಯದ ಹಲವಾರು ಬಡಾವಣೆಗಳನ್ನು ಬಿಟ್ಟು ಜಾತಿಗಣತಿ ಮಾಡಿದ್ದಾರೆ ಎಂದರು.

ಉದಾಹರಣೆಗೆ ನಗರದಲ್ಲಿ 50 ಸಾವಿರ ನಮ್ಮ ಸಮುದಾಯದವರಿದ್ದಾರೆ. ಆದರೆ ಕೇವಲ 5 ಸಾವಿರ ನಮೂದಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಜಾತಿ ಗಣತಿ ಸರಿಯಾದ ರೀತಿಯಲ್ಲಿ ಆಗಿಲ್ಲ. ಜನಸಂಖ್ಯೆ ಆಧಾರದ ಮೇಲೆ ಮೀಸಲಾತಿ ಪ್ರಮಾಣ ನಿಗದಿಯಾಗುತ್ತದೆ. ಆದರೆ ಆಯೋಗವು ನಮ್ಮ ಸಮುದಾಯದ ಜನಸಂಖ್ಯೆಯನ್ನು ಕಡಿಮೆ ತೋರಿಸಿದ್ದಾರೆ. ಇದ–ರಿಂದ ನಮಗೆ ಸಿಗುವ ಮೀಸಲಾತಿ ಪ್ರಮಾಣ ಕಡಿಮೆಯಾಗುತ್ತದೆ ಎಂದು ಅವರು ಹೇಳಿದರು.

ಶೇಕಡಾ 6ರಷ್ಟು ಮೀಸಲಾತಿ ನೀಡುವುದರ ಮೂಲಕ ನಮ್ಮ ಸಮುದಾಯದ ಮುಂದಿನ ಪೀಳಿಗೆಗೆ ಅನುಕೂಲ ಕಲ್ಪಿಸಿ ಕೊಡಬೇಕು. ಜಾತಿ ಗಣತಿ ನಡೆಯುವಾಗ ನಮ್ಮ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಆಯೋಗದ ಗಮನಕ್ಕೆ ತಂದರೂ ಸಹ ಯಾವುದೇ ಕ್ರಮವನ್ನು ಕೈಗೊಳ್ಳದೆ ಹೆಚ್ಚಿನ ಪ್ರಮಾಣದಲ್ಲಿರುವಂತಹ ನಮ್ಮ ಸಮುದಾಯವನ್ನು ಕಡಿಮೆ ಪ್ರಮಾಣದಲ್ಲಿ ತೋರಿಸಿದ್ದಾರೆ. ಇದನ್ನು ನಮ್ಮ ಸಮುದಾಯ ಒಪ್ಪುವುದಿಲ್ಲ ಎಲ್ಲಾ ಸಮುದಾಯಗಳಂತೆ ನಮ್ಮ ಸಮುದಾಯಕ್ಕೂ ಮೀಸಲಾತಿಯನ್ನು ಸರಿಯಾದ ರೀತಿಯಲ್ಲಿ ನೀಡಬೇಕು ಎಂದು ಆಗ್ರಹಿಸಿದರು.

ಜಾತಿಗಣತಿ ಸಮಯದಲ್ಲಿ ನಮ್ಮ ಸಮುದಾಯಕ್ಕೆ ಆಗುತ್ತಿರುವ ಅನ್ಯಾಯದ ಬಗ್ಗೆ ಹಲವಾರು ಬಾರಿ ಮನವಿಯನ್ನು ಮಾಡಲಾಗಿತ್ತು. ಆದರೆ ಅದನ್ನು ಪರಿಗಣಿಸದೇ ಆಯೋಗ ತನ್ನದೆ ಆದ ನಿಲುವನ್ನು ತೆಗೆದುಕೊಂಡು ಏಕ ಪಕ್ಷೀಯವಾಗಿ ಜಾತಿಗಣತಿಯನ್ನು ಮಾಡಿದೆ. ಸರ್ಕಾರಕ್ಕೆ ಸಲ್ಲಿಸಿರುವ ನ್ಯಾ,ನಾಗಮೋಹನದಾಸ್ ವರದಿ ಸರಿಯಿಲ್ಲ. ಇದು ಪಕ್ಷಪಾತದಿಂದ ಕೂಡಿದೆ. ಸರ್ಕಾರ ಇದನ್ನು ಒಪ್ಪಿಕೊಳ್ಳದೆ ಸಚಿವ ಸಂಪುಟದ ಉಪ ಸಮಿತಿಯನ್ನು ರಚನೆ ಮಾಡುವುದರ ಮೂಲಕ ನಮ್ಮ ಸಮುದಾಯಕ್ಕೆ ನ್ಯಾಯವನ್ನು ಒದಗಿಸುವಂತೆ ಮುಖಂಡರು ಒತ್ತಾಯಿಸಿದರು.

ಸಮಾಜದ ಮುಖಂಡರಾದ ರಮೇಶ ಗಂಜಿಹಾಳ, ಜಮಖಂಡಿಯ ರವಿ ಬಬಲೇಶ್ವರ, ಶಶಿಕಾಂತ ದೊಡಮನಿ, ಎನ್.ಬಿ.ಗಸ್ತಿ, ಯಮನಪ್ಪ ಶಿರೂರು ಮೊದಲಾದವರು ಮಾತನಾಡಿದರು.

ನಂತರ ಅಂಬೇಡ್ಕರ್ ಭವನದಿಂದ ಮೆರವಣಿಗೆಯಲ್ಲಿ ಹೊರಟು ಜಿಲ್ಲಾಧಿಕಾರಿಗಳ ಕಛೇರಿ ತಲುಪಿತು. ಬಸವರಾಜ ಬದಾಮಿ ಮನವಿ ಪತ್ರ ಓದಿ ಜಿಲ್ಲಾಧಿಕಾರಿ ಸಂಗಪ್ಪ ಅವರಿಗೆ ಸಲ್ಲಿಸಿದರು. ಪ್ರೇಮನಾಥ ಗರಸಂಗಿ, ವಿವೇಕಾನಂದ ಗರಸಂಗಿ, ಎಚ್.ಡಿ.ಹುನ್ನೂರ, ಸಂಗಪ್ಪ ನಾರಾಯಣಿ, ಮಹೇಶ ಬೀಳಗಿ, ಶ್ರೀಶೈಲ ಚಲವಾದಿ, ಸಿದ್ದರಾಜ ಸೊನ್ನದ, ಶಿವಕುಮಾರ ಸಿಂಗೆ ಚಿಟ್ಟು ನೀಲನಾಯಕ, ಸಂಜು ಕಾಂಬಳೆ ಪ್ರತಿಭಟನೆಯ ನೇತೃತ್ವ ವಹಿಸಿದ್ದರು. ಜಿಲ್ಲೆಯ ಜಮಖಂಡಿ, ಮುಧೋಳ, ಬೀಳಗಿ, ಬದಾಮಿ, ಹುನಗುಂದ, ಇಲಕಲ್ಲ ತಾಲೂಕುಗಳಿಂದ ಸಮಾಜದ ಮುಖಂಡರುಗಳು ಹಾಗೂ ಕಾರ್ಯಕರ್ತರು ಆಗಮಿಸಿದ್ದರು.

# ಬೆಳಗಾವಿಯಲ್ಲಿ ಜನತಾ ನ್ಯಾಯಾಲಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14–ಜಿಲ್ಲೆಯ ವ್ಯಾಜ್ಯ ಪ್ರಕರಣಗಳನ್ನು ಬೇಗನೇ ಇತ್ಯರ್ಥಪಡಿಸಲು ಕರ್ನಾಟಕ ಉಚ್ಚ ನ್ಯಾಯಾಲಯ ಖಾಯಂ ಜನತಾ ನ್ಯಾಯಾಲಯವನ್ನು ಬೆಳಗಾವಿಯಲ್ಲಿ ಪ್ರಾರಂಭಿಸಲಾಗಿದೆ.

ಈ ನ್ಯಾಯಾಲಯ ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಪಟ್ಟ ವಿವಾದಗಳನ್ನು ರಾಜೀ ಮತ್ತು ವಿಚಾರಣೆ ಮೂಲಕ ತಿರ್ಮಾನ ಮಾಡುವ ಅಧಿಕಾರ ಹೊಂದಿದೆ. 1 ಕೋಟಿ ರೂ.ಗಳ ವರೆಗಿನ ಮೌಲ್ಯದ ವ್ಯಾಜ್ಯಗಳ ಪ್ರಕರಣಗಳನ್ನು ದಾಖಲಿಸಬಹುದಾಗಿದೆ.

ಪ್ರಕರಣ ದಾಖಲು ಮಾಡಲು ಆದಾಯ ಮಿತಿ, ಶುಲ್ಕ ಇರುವದಿಲ್ಲ. ಜನತಾ ನ್ಯಾಯಾಲಯದಲ್ಲಿ ದಾಖಲಿಸಿದ ಪ್ರಕರಣ ಬೇರೆ ನ್ಯಾಯಾಲಯದಲ್ಲಿ ದಾವೆ ಸಲ್ಲಿಸುವಂತಿಲ್ಲ. ಒಂದು ವೇಳೆ ಉಭಯ ಪಕ್ಷಗಾರರು ರಾಜೀ ಸಂಧಾನಕ್ಕೆ ಒಪ್ಪದೇ ಇದ್ದರೆ ವಿವಾದವನ್ನು ವಿಚಾರಣೆ ಮಾಡಿ ಕಾನೂನು ಆಧಾರ ಮೇಲೆ ತ್ವರಿತವಾಗಿ ಐತೀರ್ಪು ನೀಡಲಾಗುತ್ತದೆ.

ಈ ಐತೀರ್ಪುನ ಬಗ್ಗೆ ಯಾವುದೇ ಸಿವಿಲ್ ಅಥವಾ ಜಿಲ್ಲಾ ನ್ಯಾಯಾಲಯದಲ್ಲಿ ಪ್ರಶ್ನಿಸುವ ಅವಕಾಶವಿಲ್ಲ. ಆದರೆ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸುವುದರ ಮೂಲಕ ಮಾತ್ರ ಐತೀರ್ಪನ್ನು ಪ್ರಶ್ನಿಸಲು ಅವಕಾಶವಿದೆ ಎಂದು ನ್ಯಾಯಾಧೀಶ ಎನ್.ವಿ.ವಿಜಯ್ ತಿಳಿಸಿದ್ದಾರೆ.

# ಧರ್ಮಸ್ಥಳ:ಅಪಪ್ರಚಾರಕರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14–ಶ್ರೀಕ್ಷೇತ್ರ ಧರ್ಮಸ್ಥಳದ ಕುರಿತು ಅನಗತ್ಯವಾಗಿ ಸುಳ್ಳುಸುದ್ದಿಗಳು ಪ್ರಸಾರವಾಗದಂತೆ ಸರಕಾರ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಬಾಗಲಕೋಟೆ ಜಿಲ್ಲೆಯ ಶ್ರೀಕ್ಷೇತ್ರ ಧರ್ಮಸ್ಥಳ ಭಕ್ತಸಮೂಹ ಬುಧವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ನವನಗರದ ಬಾಬು ಜಗಜೀವನರಾವ್ ವೃತ್ತದಿಂದ ಜಿಲ್ಲಾಧಿಕಾರಿ ಕಛೇರಿವರೆಗೆ ಮೆರವಣಿಗೆಯಲ್ಲಿ ಹೊರಟ ಭಕ್ತರು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಮಾಜಿ ಶಾಸಕ ವೀರಣ್ಣ ಚರಂತಿಮಠ ಮಾತನಾಡಿ, ರಾಜ್ಯದಲ್ಲಿ ಹಿಂದೂ ದೇವಾಲಯಗಳನ್ನು ಗುರಿಯಾಗಿಸಿಕೊಂಡು ಈ ರೀತಿಯ ಅಪಪ್ರಚಾರ ಮಾಡಲಾಗುತ್ತಿದೆ. ಕಾಣದ ಕೈಗಳು ಕೆಲಸ ಮಾಡುತ್ತಿದ್ದು, ಇದನ್ನೆಲ್ಲ ತಡೆಗಟ್ಟಲು ನಾವೆಲ್ಲರೂ ಒಂದಾಗಿ ಹೋರಾಡಬೇಕಿದೆ. ಶ್ರೀಕ್ಷೇತ್ರದ ಬಗ್ಗೆ ಅಪಪ್ರಚಾರ ಮಾಡುತ್ತಿರುವವರ ವಿರುದ್ದ ಸರ್ಕಾರ ತಕ್ಷಣ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಧರ್ಮಸ್ಥಳ ಅಭಿಮಾನಿಗಳ ವೇದಿಕೆ ಮುಖಂಡ ರಾಜು ನಾಯ್ಕರ ಮಾತನಾಡಿ, ಕಳೆದ ಕೆಲವು ವರ್ಷಗಳಿಂದ ಗಿರೀಶ್ ಮಟ್ಟಣ್ಣವರ್, ಮಹೇಶ್‌ಶೆಟ್ಟಿ ತಿಮರೋಡಿ, ಸಮೀರ್ ಎಂ.ಡಿ., ಸಂತೋಷ್ ಶೆಟ್ಟಿ, ಜಯಂತ ಟಿ., ಅಜಯ ಅಂಚನ್ ಮತ್ತು ಅವನ ಸಹಚರರು ಸೇರಿಕೊಂಡು ಮಂಜುನಾಥ ಸ್ವಾಮಿ ದೇವಾಲಯ ಹಾಗೂ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆ ಅವರಿಗೆ ಕಳಂಕ ತರಲು ಕೀಳು ಮಟ್ಟದ ಭಾಷೆಯನ್ನು ಉಪಯೋಗಿಸಿ ವೀಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರಿಸುತ್ತಿದ್ದಾರೆ. ಇಂತಹ ಕೃತ್ಯ ಮಾಡುತ್ತಿರುವವರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಭಕ್ತರ ಭಾವನೆಗಳ ಜೊತೆ–ಗೆ ಚೆಲ್ಲಾಟವಾಡುವ ಇಂತಹ ಕಿಡಿಗೇಡಿಗಳನ್ನು ಮಟ್ಟ ಹಾಕಬೇಕು. ಅವರು ಇದೇ ರೀತಿಯ ಚಟುವಟಿಕೆಗಳನ್ನು ಮುಂದುವರೆಸಿದರೆ ಬರುವ ದಿನಗಳಲ್ಲಿ ಧರ್ಮಸ್ಥಳಕ್ಕೆ ತೆರಳಿ ಅಲ್ಲಿಯೂ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ನಾಯ್ಕರ ಹೇಳಿದರು.

ಪ್ರತಿಭಟನೆಯಲ್ಲಿ ಜಿ.ಎನ್.ಪಾಟೀಲ, ಶ್ರೀಕಾಂತ ಸಂದಿಮನಿ, ರಂಗನಗೌಡ ದಂಡನ್ನವರ, ಗೀತಾ ನಾಲತ್ತವಾಡ, ರವೀಂದ್ರ ಒಂಟಕುದರಿ, ಸುರೇಶ ಮಜ್ಜಗಿ, ಶ್ರೀಶೈಲಗೌಡ ಪಾಟೀಲ ಸೇರಿ ಅಪಾರ ಸಂಖ್ಯೆಯ ಜನ ಪಾಲ್ಗೊಂಡಿದ್ದರು.

# ಅಂಕಿ ಅಂಶಗಳ ನೋಟ : ಪೂರ್ವಭಾವಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14–ಬಾಗಲಕೋಟೆ ತಾಲೂಕಾ ಅಂಕಿ ಅಂಶಗಳ ನೋಟ ಪ್ರಕಟಿಸುವ ಹಿನ್ನೆಲೆಯಲ್ಲಿ ಜಿ.ಪಂ ಮುಖ್ಯ ಯೋಜನಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲೂಕಾ ಪಂಚಾಯತ ಸಭಾಭವನದಲ್ಲಿ ಪೂರ್ವಭಾವಿ ಸಭೆ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಬಿ.ಅಲ್ಲಾಪೂರ ಮಾತನಾಡಿ, ಅಂಕಿ ಅಂಶಗಳ ನೋಟವನ್ನು ಪ್ರಕಟಿಸುವದರಿಂದ ತಾಲೂಕಾ ಮಟ್ಟದಲ್ಲಿ ಅಭಿವೃದ್ಧಿಯ ಮಟ್ಟ ಅಳೆಯಲು ಸಹಕಾರಿಯಾಗುತ್ತದೆ. ಗ್ರಾಮ ಪಂಚಾಯತಿವಾರು ಮಾಹಿತಿ ಸಂಗ್ರಹಿಸಿ ಗ್ರಾಮ ಪಂಚಾಯತಿಯ ಅಭಿವೃದ್ಧಿ ಹಾಗೂ ಹಿಂದುಳಿದಿರುವಿಕೆ ಮಟ್ಟವನ್ನು ರಾಜ್ಯ ಮಟ್ಟದಲ್ಲಿ ಅಳೆಯಲು ಸಾಧ್ಯವಾಗುತ್ತದೆ. ಎಲ್ಲ ಇಲಾಖೆಗಳಿಗೆ ಸಂಬಂಧಿಸಿದ ಮಾಹಿತಿಯ ಕುಂದುಕೊರತೆಗಳ ಬಗ್ಗೆ ವಿಚಾರಿಸಿ ಪಾರದರ್ಶಕ ಮಾಹಿತಿಯನ್ನು ಒದಗಿಸಲು ಸೂಚಿಸಿದರು.

ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಮಾತನಾಡಿ, ಮಾಹಿತಿಗಳನ್ನು ಸತ್ಯಾನುಸತ್ಯತೆ ಪರಿಶೀಲಿಸಿ ಸರಿಯಾದ ಹಾಗೂ ಪಾರದರ್ಶಕ ಮಾಹಿತಿ ಒದಗಿಸಲು ಸೂಚಿಸಿದರು. ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಗೌರಮ್ಮ ಸುಂಕದ ಅಂಕಿ ಅಂಶಗಳ ಮಹತ್ವದ ಬಗ್ಗೆ ಸಭೆಗೆ ತಿಳಿಸಿದರು.

ಸಭೆಯಲ್ಲಿ ತಾಲೂಕಾ ಪಂಚಾಯತ ಯೋಜನಾಧಿಕಾರಿ ಸಿ.ಎನ್.ಹೊಸಮನಿ ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಆ.18 ಶಿರೂರಿನಲ್ಲಿ ರಾಮಲಿಂಗೇಶ್ವರ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.14–ತಾಲೂಕಿನ ಶಿರೂರ ಪಟ್ಟಣದಲ್ಲಿ ಶ್ರಾವಣ ಮಾಸದ ನಿಮಿತ್ತ ಆ.18 ರಾಮಲಿಂಗೇಶ್ವರ ಜಾತ್ರೆ ಜರುಗಲಿದೆ.

ಸೋಮವಾರ ಬೆಳಿಗ್ಗೆ 5 ಗಂಟೆಗೆ ರಾಮಲಿಂಗೇಶ್ವರ ದೇವರಿಗೆ ರುದ್ರಾಭಿಷೇಕ, ಮುಂಜಾನೆ 8–30 ಗಂಟೆಯಿಂದ ಮಧ್ಯಾಹ್ನ 12 ರವರೆಗೆ ಕಳಸದ ಮೆರವಣಿಗೆ, ಸಾಯಂಕಾಲ 4 ಗಂಟೆಗೆ ನಂದಿ ಧ್ವಜಗಳ ಮೆರವಣಿಗೆ ನಡೆಯಲಿದ್ದು, 5 ಗಂಟೆಗೆ ರಥೋತ್ಸವ ಜರುಗುವುದು.

ಮಂಗಳವಾರ ಆ.19 ರಂದು ಮಧ್ಯಾಹ್ನ 3–30 ಗಂಟೆಯಿಂದ 6–30ವರೆಗೆ ಸ್ಥಳೀಯ ಸಿದ್ದೇಶ್ವರ ಪ್ರೌಢಶಾಲೆಯ ಆವರಣದಲ್ಲಿ ಜಂಗೀ ಕುಸ್ತಿಗಳು ನೆರವೇರಲಿವೆ ಎಂದು ರಾಮಲಿಂಗೇಶ್ವರ ದೇವಸ್ಥಾನ ಸಮಿತಿ ತಿಳಿಸಿದೆ.

# ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ತಿರಂಗಾ ಯಾತ್ರೆ ಸಂಭ್ರಮಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಪಟ್ಟಣದಲ್ಲಿ ತಾಲೂಕಾಡಳಿತವತಿಯಿಂದ ಗುರುವಾರ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಹರ್ ಘರ್ ತಿರಂಗಾ ರ್‍ಯಾಲಿಯನ್ನು ತಹಶೀಲ್ದಾರ ಅಮೀತಕುಮಾರ ಕುಲಕರ್ಣಿ ಅವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಯಿತು.

ನಗರದ ಶಾಂತಿವರ್ಧಕ ಶಾಲೆಯಿಂದ ಆರಂಭಗೊಂಡ ತಿರಂಗಾ ಯಾತ್ರೆಯು ನಗರ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ವಿವಿಧ ಶಾಲೆಯ ಮಕ್ಕಳು ಲೇಜಿಮ್ಮ ಪ್ರದರ್ಶನ ಮಾಡುತ್ತಾ, ಘೋಷಣೆಗಳನ್ನು ಕೂಗುತ್ತಾ, ತ್ರಿವರ್ಣ ಧ್ವಜಗಳೊಂದಿಗೆ ಯಾತ್ರೆಯಲ್ಲಿ ಹೆಜ್ಜೆ ಹಾಕಿದರು. ಹಾಗೂ ತಹಶೀಲ್ದಾರ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ಮನೆಗೆ ತೆರಳಿ ತ್ರಿವರ್ಣ ಧ್ವಜಗಳನ್ನು ಹಂಚಿದರು. ರ್‍ಯಾಲಿಯಲ್ಲಿ ತಾ.ಪಂ.ನ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹಣಮಂತರಾಯ ಕೌಟಗೆ , ಪಿಡಿಓ ಶೇಷಪ್ಪಾ, ಅನುಷ್ಠಾನ ಇಲಾಖೆ ಅಧಿಕಾರಿಗಳು, ಶಾಲಾ ಶಿಕ್ಷಕರು, ಮಕ್ಕಳು, ತಾಲೂಕು ಆಡಳಿತ ಸಿಬ್ಬಂದಿಗಳು, ತಾಲೂಕಾ ಪಂಚಾಯತ ಸಿಬ್ಬಂದಿಗಳು, ನರೇಗಾ, ಸಿಬ್ಬಂದಿಗಳು ಹಾಗೂ ಇತರರು ಹಾಜರಿದ್ದರು.

# ವಿವಿಧೆಡೆ ದಾಳಿ: 06 ಬಾಲಕಾರ್ಮಿಕ, ಕಿಶೋರ ಕಾರ್ಮಿಕ ಮಕ್ಕಳ ರಕ್ಷಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.14–ನಗರದ ರೂಪನಗುಡಿ ರಸ್ತೆ, ಕೋಲ್ಮಿ ಬಜಾರ್, ಎ.ಪಿ.ಎಂ.ಸಿ, ಮಿಲ್ಲರಪೇಟೆ, ಕಣೆಕಲ್ ಬಸ್ ನಿಲ್ದಾಣ ಮುಂತಾದ ವಿವಿಧ ಸ್ಥಳಗಳಲ್ಲಿನ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿಯು ದಾಳಿ ನಡೆಸಿ 06 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ.

ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿ ಪಡೆದುಕೊಂಡು ಎಲ್ಲಾ ಮಕ್ಕಳನ್ನು ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಗಿದೆ. ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡಿ ಜಾಗೃತಿ ಮೂಡಿಸಲಾಯಿತು.

ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಹೊಸಮನೆ ಇವರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ಕೈಗೊಳ್ಳಲಾಗಿದೆ. ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಕಾರ್ಮಿಕ ನಿರೀಕ್ಷಕರಾದ ರಮೇಶ್, ಪರಶುರಾಮ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್, ಸಂಪನ್ಮೂಲ ವ್ಯಕ್ತಿ ವಿರುಪಾಕ್ಷಪ್ಪ, ಕಾರ್ಖಾನೆ ಮತ್ತು ಬಾಯ್ಲರ್ ಇಲಾಖೆಯ ಗೌಸ್ ಪೀರ್, ಸಮಾಜ ಕಲ್ಯಾಣ ಇಲಾಖೆಯ ಶಿವಣ್ಣ, ಪೋಲಿಸ್ ಇಲಾಖೆಯ ಸಿಬ್ಬಂದಿಗಳು, ಮಕ್ಕಳ ಸಹಾಯವಾಣಿ ಸಿಬ್ಬಂದಿ ಕಾರ್ತಿಕ್, ರೀಚ್ ಸಂಸ್ಥೆಯ ಸಂಯೋಜಕ ಲಕ್ಷ್ಮೀದೇವಿ, ಬಸಮ್ಮ ಮತ್ತು ಹನುಮಂತಪ್ಪ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.
















Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.